ವಿಜಯಪುರ | ಸಂಪುಟ 02 | ಸಂಚಿಕೆ 71 | ಪುಟ 4 | ₹ 3.00
https://udayarashminews.com
udayarashmi 7026028778

# ಉದಯ ರಶ್ಮಿ

Udayarashmi Kannada Daily
ಜನಪರ-ಜೀವಪರ
ಕನ್ನಡ ದಿನಪತ್ರಿಕೆ
ಸಂಪಾದಕ : ಇಂದುಶೇಖರ ಮಣೂರ
Editor: Indushekhar Manur
editor.udayarashmi@gmail.com
RNI NO: KARKAN/2023/86203
ಭಾನುವಾರ, ಮೇ 05, 2024



“ನರೇಂದ್ರ ಮೋದಿ ಅವರಿಗೆ 10 ವರ್ಷ ಅವಕಾಶ ನೀಡಿದ್ದು ಜನರಿಗ ಸಾಕು ಎನಿಸಿದೆ. ಹೀಗಾಗಿ ಅವ–ರಿಗೆ ಈಗ ಕಾಂಗ್ರೆಸ್ ಗ್ಯಾರಂಟಿಗಳ ಮೇಲೆ ಭರವಸೆ ಮೂಡಿದೆ. ಮತದಾರರು ಈ ಚುನಾವಣೆಯಲ್ಲಿ ಕಾಂಗ್ರೆಸ್ ಗೆಲ್ಲಿಸಿ ಬಿಜೆಪಿಗೆ ತಕ್ಕಪಾಠ ಕಲಿಸಲು ಸನ್ನದ್ಧರಾಗಿದ್ದಾರೆ.”

– ಎಂ.ಬಿ.ಪಾಟೀಲ
ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವರು

## ಚುನಾವಣೆ ಪ್ರಚಾರದಲ್ಲಿ ಮಕ್ಕಳನ್ನು ಬಳಸಿಕೊಂಡ ಹಿನ್ನೆಲೆ ನೀತಿ ಸಂಹಿತೆ ಉಲ್ಲಂಘನೆ ಆರೋಪ

# ಕೇಂದ್ರ ಸಚಿವ ಅಮಿತ್ ಶಾ ವಿರುದ್ಧ ಪ್ರಕರಣ ದಾಖಲು!

ಹೈದರಾಬಾದ್: ಚುನಾವಣೆ ಪ್ರಚಾರದಲ್ಲಿ ಮಕ್ಕಳನ್ನು ಬಳಸಿಕೊಂಡ ಹಿನ್ನೆಲೆ ಮಾದರಿ ನೀತಿ ಸಂಹಿತೆ ಉಲ್ಲಂಘನೆ ಆರೋಪದಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಸೇರಿದಂತೆ ಬಿಜೆಪಿ ನಾಯಕರ ವಿರುದ್ಧ ತೆಲಂಗಾಣದ ಹೈದರಾಬಾದ್‌ನಲ್ಲಿ ಕ್ರಿಮಿನಲ್ ಪ್ರಕರಣವನ್ನು ದಾಖಲಿಸಲಾಗಿದೆ.

ಚುನಾವಣಾ ರ್‍ಯಾಲಿಯಲ್ಲಿ ಮಕ್ಕಳನ್ನು ತೊಡಗಿಸಿಕೊಂಡ ಆರೋಪದ ಮೇಲೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಮತ್ತು ಅವರ ಸಂಪುಟ ಸಹೋದ್ಯೋಗಿ ಮತ್ತು ತೆಲಂಗಾಣ ಬಿಜೆಪಿ ಮುಖ್ಯಸ್ಥ ಜಿ ಕಿಶನ್ ರೆಡ್ಡಿ, ಗೋಶಾಮಹಲ್ ಶಾಸಕ ಟಿ. ರಾಜಾ ಸಿಂಗ್, ಹೈದರಾಬಾದ್ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಮಾಧವಿ ಲತಾ ಮತ್ತು ಹೈದರಾಬಾದ್‌ನ ಬಿಜೆಪಿ ನಾಯಕ ಟಿ. ಯಮನ್ ಸಿಂಗ್ ವಿರುದ್ಧ ಹೈದರಾಬಾದ್ ಪೊಲೀಸರು ಕ್ರಿಮಿನಲ್ ಮೊಕದ್ದಮೆ ದಾಖಲಿಸಿದ್ದಾರೆ.

ಬಿಜೆಪಿ ಚುನಾವಣಾ ಪ್ರಚಾರದ ಫೋಟೋ ವೈರಲ್ ಆಗಿದೆ. ಅದರಲ್ಲಿ ಮಕ್ಕಳು ಬಿಜೆಪಿ ಫಲಕಗಳು ಮತ್ತು ಬಲೂನ್‌ಗಳನ್ನು ಹಿಡಿದಿದ್ದರು ಮತ್ತು ಸಚಿವರು ಮತ್ತು ಇತರ ಬಿಜೆಪಿ ಪದಾಧಿಕಾರಿಗಳೊಂದಿಗೆ ವೇದಿಕೆಯಲ್ಲಿ ನಿಂತುಕೊಂಡಿದ್ದಾರೆ.

ಮೊಘಲ್‌ಪುರ ಪೊಲೀಸರು ಗುರುವಾರ ದಾಖಲಿಸಿದ ಎಫ್‌ಐಆರ್‌ನಲ್ಲಿ ಅಮಿತ್ ಶಾ ಅವರನ್ನು ಆರೋಪಿ ನಂ.3 ಎಂದು ಹೆಸರಿಸಲಾಗಿದೆ. ತೆಲಂಗಾಣ ಪ್ರದೇಶ ಕಾಂಗ್ರೆಸ್ ಘಟಕದ ಉಪಾಧ್ಯಕ್ಷ ಜಿ ನಿರಂಜನ್ ಅವರು ತೆಲಂಗಾಣ ಮುಖ್ಯ ಚುನಾವಣಾ ಅಧಿಕಾರಿಗೆ ದೂರು ನೀಡಿದ ನಂತರ ಅಮಿತ್ ಶಾ ಸೇ–ರಿದಂತೆ ಇತರರ ವಿರುದ್ಧ ಪ್ರಕರಣ




ದಾಖಲಿಸಿಕೊಳ್ಳಲಾಗಿದೆ.


ಚುನಾವಣಾ ಆಯೋಗವು ಇತ್ತೀಚೆಗೆ ಚುನಾವಣಾ ಸಂಬಂಧಿತ ಪ್ರಚಾರ ಅಥವಾ ಚಟುವಟಿಕೆಗಳಲ್ಲಿ ಮಕ್ಕಳನ್ನು ಬಳಸಿಕೊಳ್ಳದಂತೆ ರಾಜಕೀಯ ಪಕ್ಷಗಳಿಗೆ ಸ್ಪಷ್ಟವಾಗಿ ನಿರ್ದೇಶಿಸಿತ್ತು. ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಮೇ.1ರಂದು ಹೈದರಾಬಾದ್ ಲೋಕಸಭಾ ಕ್ಷೇತ್ರದ ಲಾದರ್ವಾಜಾದಿಂದ ಸುಧಾ ಟಾಕೀಸ್‌ವರೆಗೆ ಚುನಾವಣಾ ರ್‍ಯಾಲಿಯಲ್ಲಿ ಭಾಗವಹಿಸಿದ್ದರು. ರ್‍ಯಾಲಿಯು ಸುಧಾ ಟಾಕೀಸ್‌ನಲ್ಲಿ ಸಾರ್ವಜನಿಕ ಸಭೆಯೊಂದಿಗೆ ಸಮಾಪ್ತಿಯಾಗಿತ್ತು, ಅಲ್ಲಿ ವೇದಿಕೆಯಲ್ಲಿ ಅಮಿತ್ ಶಾ ಅವರೊಂದಿಗೆ ಕೆಲವು ಮಕ್ಕಳನ್ನು ಕಾಣಬಹುದು. ಅದರಲ್ಲಿ ಓರ್ವ ಮಗು ಬಿಜೆಪಿ ಭಾವುಟ ಪ್ರದರ್ಶಿಸುತ್ತಿರುವುದು ಕಂಡು ಬಂದಿದೆ. ಇದು ಚುನಾವಣಾ ಆಯೋಗದ ಮಾರ್ಗಸೂಚಿಗಳ ಸ್ಪಷ್ಟ ಉಲ್ಲಂಘನೆಯಾಗಿದೆ ಎಂದು ದೂರಿನಲ್ಲಿ ತಿಳಿಸಲಾಗಿತ್ತು.

ದೂರಿನ ಬಗ್ಗೆ ಪ್ರತಿಕ್ರಿಯಿಸಿದ ಚುನಾವಣಾ ಆಯೋಗ, ಘಟನೆಯ ಕು–ರಿತು ತನಿಖೆ ನಡೆಸುವಂತೆ ಹೈದರಾಬಾದ್ ಪೊಲೀಸ್ ಆಯುಕ್ತರಿಗೆ ಆದೇಶಿಸಿದೆ. ಹೈದರಾಬಾದ್ ಪೊಲೀಸ್ ಕಮಿಷನರ್ ಕೊತಕೋಟಾ ಶ್ರೀನಿವಾಸ್ ರೆಡ್ಡಿ ಈ ಬಗ್ಗೆ ತನಿಖೆ ನಡೆಸಿ ವರದಿ ಸಲ್ಲಿಸುವಂತೆ ದಕ್ಷಿಣ ವಲಯ ಡಿಸಿಪಿ ಸ್ನೇಹಾ ಮೆಹ್ರಾ ಅವರಿಗೆ ಆದೇಶ ನೀಡಿದ್ದಾರೆ. ಆದೇಶದ ನಂತರ ಮೊಘಲ್ಪುರ ಪೊಲೀಸರು ಐಪಿಸಿ ಸೆಕ್ಷನ್ 188ರ ಅಡಿಯಲ್ಲಿ ಪ್ರಕರಣವನ್ನು ದಾಖಲಿಸಿದ್ದಾರೆ.

## ರಾಜ ನುಡಿ

ವಾಸ್ಕೋ–ಡ–ಗಾಮ ಭಾರತವನ್ನು ಕಂಡು ಹಿಡಿದ. ವಾಸ್ಕೋ–ಡ–ಗಾಮ ಭಾರತಕ್ಕೆ ಸಮುದ್ರ ಮಾರ್ಗ ಕಂಡು ಹಿಡಿದ. ಇಲ್ಲಿ ಎರಡು ದೃಷ್ಟಿಕೋನಗಳಿವೆ. ಒಂದು ಸುಳ್ಳನ್ನು ಸತ್ಯವೆಂದು ಬಿಂಬಿಸುವುದು. ಮತ್ತೊಂದು ಸತ್ಯವನ್ನು ಇದ್ದಂತೆ ಒಪ್ಪಿಕೊಳ್ಳುವುದು. ದೃಷ್ಟಿಕೋನ ವಿಶಾಲವಾದರೆ ದೈವತ್ವ, ಸಂಕುಚಿತವಾದರೆ ದಾರಿದ್ರ.

–ಡಾ. ರಾಜಶೇಖರ ನಾಗೂರ



## ವಚನ ಚಿಂತನ 372

*ನಾನೊಂದು ಕಾರಣ ಮತ್ರ್ಯಕ್ಕೆ ಬಂದೆನು,*
*ಬಂದ ಬಳಲಿಕೆಯ ಪರಿಹರಿಸಲಿಕ್ಕೆ ಚೆನ್ನಬಸವಣ್ಣ ಬಂದನು,*
*ಇನ್ನು ಬಾರದಂತೆ ಪ್ರಭುದೇವರು ಬಂದರು,*
*ಇದಕ್ಕೆ ಆಜ್ಞಾಕರ್ತೃ ಮಡಿವಾಳ ಮಾಚಿತಂದೆ ಬಂದನು.*
*ನಾನಿನ್ನಾರಿಗಂಜೆನು, ಬದುಕಿದೆನು*
*ಕಾಣಾ ಕೂಡಲಸಂಗಮದೇವಾ.*

ವಚನಗಳು ಅಂದಿನ ಶರಣರು ಜೀವನಚರಿತ್ರೆಯ ಕೆಲವು ಪ್ರಮುಖ ಅಂಶಗಳನ್ನು ಅಡಗಿಸಿಕೊಂಡಿರುತ್ತವೆ. ನೀರಿನ ವಚನದಲ್ಲಿ ಒಂದು ಕಲ್ಯಾಣದಲ್ಲಿ ಬಸವಣ್ಣನವರು ಕೈಗೊಂಡ ನೂತನ ವೈಚಾರಿಕ ಚಿಂತನೆಗೆ ಯಾರ್ಯಾರು ಸಹಾಯ ನೀಡಿದರು ಎಂಬುದನ್ನು ನೆನೆದಿರುವುದನ್ನು ಕಾಣಬಹುದು, ಬಸವಣ್ಣನವರು ತಮ್ಮ ಜನನದ ಮುಖ್ಯ ಉದ್ದೇಶವನ್ನು ಮೊದಲೇ ಅರಿತ್ತಿದ್ದರು ಎಂಬುದನ್ನು ವಚನದ ಪ್ರಾರಂಭದ ಸಾಲಿನಿಂದ ನಾವು ಅರಿತುಕೊಳ್ಳಬಹುದು (ನಾನೊಂದು ಕಾರಣ ಮತ್ರ್ಯಕ್ಕೆ ಬಂದೆನು,), ತಮ್ಮ ಕಾರ್ಯ ಸಿದ್ದಿ ಎದುರಾದ ಸಮಸ್ಯೆಗಳಿಗೆ ದಿಟ್ಟತನದಿಂದ ಮುನ್ನೆಡೆಯುವಾಗ ಉಂಟಾದ ಬಳಲಿಕೆಯನ್ನು ತುಂಬುವುದಕ್ಕಾಗಿ ಚೆನ್ನಬಸವಣ್ಣನವರು ಜೊತೆಯಾದರು ಎಂಬುದನ್ನು “ ಬಂದ ಬಳಲಿಕೆಯ ಪರಿಹರಿಸಲಿಕ್ಕೆ ಚೆನ್ನಬಸವಣ್ಣ ಬಂದನು,” ಎಂದಿದ್ದಾರೆ. ಬಸವಣ್ಣನವರ ಈ ನೂತನ ಚಳುವಳಿಗೆ ಆನೆಬಲ ಒದಗಿಸಿಕೊಟ್ಟವರು ಅಲ್ಲಮಪ್ರಭುಗಳು , ಅವರು ಕಲ್ಯಾಣದಲ್ಲಿ ಬಹಳ ದಿನಗಳವರೆಗೆ ಇರದಿದ್ದರೂ ಚಳುವಳಿಗೆ ಒಂದು ಸರಿಯಾದ ಮಾರ್ಗವನ್ನು ಕಲ್ಪಿಸಿ ಅಲ್ಲಿಂದ ನಿರ್ಗಮಿಸಿದ ಬಗೆಯನ್ನು “

ಕಲ್ಯಾಣಕ್ಕೆ ಅಲ್ಲಮಪ್ರಭುಗಳು ಆಗಮಿಸುವ ಸಂಭ್ರಮದ ಪರಿಯನ್ನು ಬಸವಣ್ಣನವರು ತಮ್ಮ ವಚನದಲ್ಲಿ ಈ ರೀತಿಯಾಗಿ ಸಂತಸಗೊಂಡಿದ್ದಾರೆ. “ಮನದೊಡೆಯ ಮನೆಗೆ ಬಂದಡೆ ಕನಕದ ತೋರಣವ ಕಟ್ಟಿ, ಷಡುಸವ್ಮಾರ್ಜನೆಯ ಮಾಡಿ, ರಂಗವಾಲಿಯನಿಕ್ಕಿ, ಉಘೇ, ಚಾಂಗು, ಭಲಾ ಎಂಬೆನು. ಕೂಡಲಸಂಗಮದೇವಾ, ನಿಮ್ಮ ಶರಣ ಪ್ರಭುದೇವರು ಬಂದಡೆ ಉಬ್ಬಿ ಕೊಬ್ಬಿ ನಲಿನಲಿದಾಡುವೆ.”

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

# ಅಗ್ರಗಣ್ಯ ರಾಷ್ಟಗಳ ಸಾಲಿನಲ್ಲಿ ಭಾರತ :ಕರಂದ್ಲಾಜೆ

ಉದಯರಶ್ಮಿ ನ್ಯೂಸ್



ಚಿಮ್ಮಡ: ಕಾಂಗ್ರೆಸ್ ಆಡಳಿತದಲ್ಲಿ ಭ್ರಷ್ಟಾಚಾರ, ಭಯೋತ್ಪಾದನೆಯ ಹೊಡೆತಕ್ಕೆ ನಲುಗುತಿದ್ದ ದೇಶವನ್ನು ನರೇಂದ್ರ ಮೋದಿಯವರು ವಿಶ್ವದ ಅಗ್ರಗಣ್ಯ ರಾಷ್ಟಗಳ ಸಾಲಿಗೆ ತಂದು ನಿಲ್ಲಿಸಿದ್ದು ಅಂಥಹ ವಿಶ್ವ ನಾಯಕನನ್ನು ಮತ್ತೊಮ್ಮೆ ಪ್ರಧಾನಿ ಮಾಡಲು ಪಿ.ಸಿ. ಗದ್ದಿಗೌಡರಿಗೆ ಮತನೀಡಬೇಕೆಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಹೇಳಿದರು.

ಗ್ರಾಮದಲ್ಲಿ ಶುಕ್ರವಾರ ರಾತ್ರಿ ಹಮ್ಮಿಕೊಳ್ಳಲಾಗಿದ್ದ ಬ್ರಹತ್ ರೋಡಶೋನಲ್ಲಿ ಭಾಗವಹಿಸಿ ಸಾರ್ವಜನಿಕರನ್ನುದ್ದೇಶಿಸಿ ಮಾತನಾಡಿದ ಅವರು. ರಾಮಮಂದಿರ ನಿರ್ಮಾಣಕ್ಕೆ ಪದೇ ಪದೇ ತೊಡಕು ತಂದಿಡುತಿದ್ದ ಕಾಂಗ್ರೆಸ್, ಮೋದಿ ಪ್ರಧಾನಿಯಾಗುತಿ–ದ್ದಂತೆಯೇ ಮಂದಿರ ನಿರ್ಮಾಣದೊಂದಿಗೆ ದೇಶದಲ್ಲಿ ಅಭಿವೃದ್ದಿ ಪರ್ವವೇ ಪ್ರಾರಂಭವಾಗಿದ್ದು ಯಾವುದೇ ಜಾತಿ ಧರ್ಮ ನೋಡದೇ ಅಭಿವೃದ್ದಿಯೊಂದೇ ಗುರಿಯಾಗಿಸಿಕೊಂಡಿರುವ ಭಾರತೀಯ ಜನತಾ ಪಕ್ಷಕ್ಕೆ ತಮ್ಮ ಮತ ನೀಡುವ ಮೂಲಕ ಅಭ್ಯರ್ಥಿಯನ್ನು ಗೆಲ್ಲಿಸಬೇಕಾಗಿದೆ ಎಂದರು.

ಶಾಸಕ ಸಿದ್ದು ಸವದಿ ಮಾತನಾಡಿ ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ದೇಶದ ಜನರ ಆಸ್ತಿನ್ನು ಸರ್ವೇ ಮಾಡಿಸಿ ಬಹು ಸಂಖ್ಯಾತರು ಹಗಲು ರಾತ್ರಿ ದುಡಿದು ಗಳಿಸಿದ ಶೇ. 55 ಆಸ್ತಿಯನ್ನು ರೋಹಿಂಗ್ಯಾ ಮುಸ್ಲೀಮರಿಗೆ ಹಂಚಲಿದ್ದಾರೆ, ಸಿದ್ದರಾಮಯ್ಯ ನೇತ್ರತ್ವದ ರಾಜ್ಯ ಸರಕಾರ ಬಡವರಿಂದ 10 ಸಾವಿರ ನಾನಾರೂಪದಲ್ಲಿ ಸುಲಿಗೆ ಮಾಡಿ ಎರಡು ಸಾವಿರ ನೀಡಿ ಜನರನ್ನು ಮರಳು ಗೊಳಿಸುತ್ತಿದ್ದು ಜನ ಇದನ್ನು ಅರ್ಥಮಾಡಿಕೊಳ್ಳ ಬೇಕಾಗಿದೆ ಎಂದರು.

ಜಿ.ಪಂ. ಮಾಜಿ ಸದಸ್ಯೆ ಸಾವಿತ್ರಿ ಬಾಬಾಗೌಡ ಪಾಟೀಲ ಸಚಿವರಿಗೆ ಸಾಥನೀಡಿದರು. ಕಾರ್ಯಕರ್ತರಿಂದ ಪುಷ್ಪವೇಷ್ಠಿಯೊಂದಿಗೆ ಸಚಿವರನ್ನು ಗ್ರಾಮಕ್ಕೆ ಬರಮಾಡಿಕೊಳ್ಳಲಾಯಿತು.

# ದೇಶದ ಸುರಕ್ಷತೆ ಮೋದಿಯಿಂದ ಮಾತ್ರ ಸಾಧ್ಯ :ಯತ್ನಾಳ

ಉದಯರಶ್ಮಿ ನ್ಯೂಸ್



ವಿಜಯಪುರ: ನಗರ ಮತಕ್ಷೇತ್ರ ವ್ಯಾಪ್ತಿಯ ವಾರ್ಡ್ ನಂ.4 ರ ಭೂತನಾಳ ತಾಂಡಾದಲ್ಲಿ ಮನೆ ಮನೆಗೆ ತೆರಳಿ ಯುವ ನಾಯಕರಾದ ರಾಮನಗೌಡ ಪಾಟೀಲ ಯತ್ನಾಳ ಅವರು ಬಿಜೆಪಿ ಅಭ್ಯರ್ಥಿ ರಮೇಶ ಜಿಗಜಿಣಗಿ ಪರವಾಗಿ ಮತಯಾಚಿಸಿದರು.

ನಂತರ ದುರ್ಗಾದೇವಿ ದೇವಸ್ಥಾನ ಹತ್ತಿರ ನಡೆದ ಸಭೆಯಲ್ಲಿ ಭಾಗವಹಿಸಿ, ಈ ಚುನಾವಣೆ ಕೇವಲ ಅಧಿಕಾರಕ್ಕಾಗಿ ಅಲ್ಲ, ಬದಲಾಗಿ ದೇಶದ ಸುರಕ್ಷತೆ, ಸನಾತನ ಧರ್ಮ ಉಳಿಸಲು, ಅಭಿವೃದ್ಧಿಗಾಗಿ ನಡೆಯಲಿದೆ. ವಿಶ್ವ ನಾಯಕರಾದ ಪ್ರಧಾನಿ ಮೋದಿಯವರಿಂದ ಮಾತ್ರ ಜಗದ್ಗುರು ಭಾರತ ನಿರ್ಮಾಣ ಸಾಧ್ಯ ಎಂಬುದು ಪ್ರತಿಯೊಬ್ಬರಿಗೂ ಗೊತ್ತಿದೆ. ರಮೇಶ ಜಿಗಜಿಣಗಿ ಅವರನ್ನು ಗೆಲ್ಲಿಸಲು ನಾವೆಲ್ಲರೂ ಕಂಕಣಬದ್ದರಾಗೋಣ. ಹೆಚ್ಚಿನ ಪ್ರಮಾಣದಲ್ಲಿ ಮತದಾನ ಮಾಡಿಸುವ ನಿಟ್ಟಿನಲ್ಲಿ ಕೆಲಸ ಮಾಡುವುದು ಕೂಡ ಅವಶ್ಯಕ ಎಂದು ಹೇಳಿದರು.

ಮುಖಂಡರಾದ ವಿವೇಕಾನಂದ ಡಬ್ಬಿ, ಬಿಜೆಪಿ ನಗರ ಮಂಡಲ ಅಧ್ಯಕ್ಷ ಶಂಕರ ಹೂಗಾರ, ಎಸ್.ಸಿ.ಮೋರ್ಚಾ ಅಧ್ಯಕ್ಷ ಪ್ರಕಾಶ ಚವ್ಹಾಣ ಸೇರಿದಂತೆ ಸ್ಥಳೀಯ ಮುಖಂಡರು, ಕಾರ್ಯಕರ್ತರು, ಪಕ್ಷದ ವಿವಿಧ ಮೋರ್ಚಾಗಳ ಪದಾಧಿಕಾರಿಗಳು ಇದ್ದರು.

# ಬಿಜೆಪಿ ಸುಳ್ಳು ಇನ್ನು ನಡೆಯಲ್ಲ :ಲಕ್ಷ್ಮಣ ಸವದಿ

ಉದಯರಶ್ಮಿ ನ್ಯೂಸ್



ಕೊಲ್ಹಾರ: ಮೋದಿ ಮತ್ತವರ ಬಳಗ ಮತ್ತು ಬಿಜೆಪಿಯವರ ಸುಳ್ಳುಗಳನ್ನು ಜನ ಅರಿತಿದ್ದು, ಈ ಸಲ ಸರಿಯಾಗಿ ಪಾಠ ಕಲಿಸಲಿದ್ದಾರೆ ಎಂದು ಮಾಜಿ ಮುಖ್ಯಮಂತ್ರಿ ಲಕ್ಷ್ಮಣ ಸವದಿ ಹೇಳಿದರು.

ಪಟ್ಟಣದಲ್ಲಿ ಶನಿವಾರ ಕಾಂಗ್ರೆಸ್ ಅಭ್ಯರ್ಥಿ ಪರವಾಗಿ ನಡೆದ ಬಸವನ ಬಾಗೇವಾಡಿ ವಿಧಾನಸಭೆ ಕ್ಷೇತ್ರ ವ್ಯಾಪ್ತಿಯ ಪ್ರಚಾರ ಸಭೆಯಲ್ಲಿ ಮಾತನಾಡಿ, ಬಿಜೆಪಿಯವರು ಸುಳ್ಳಿನ ಮೇಲೆ ಸಾಮ್ರಾಜ್ಯ ಕಟ್ಟುತ್ತಾರೆ. ಇಲ್ಲದ್ದನ್ನು ಅಚ್ಚುಕಟ್ಟಾಗಿ ಸೃಷ್ಟಿಸುತ್ತಾರೆ. ಭ್ರಮೆಗಳನ್ನು ಬಿತ್ತಿ ಮುಗ್ಧ ಜನರ ಮತ ಕೇಳುತ್ತಾರೆ. ಇದೆಲ್ಲದರಿಂದ ಬೇಸತ್ತು ತಾವು ಬಿಜೆಪಿ ತೊರೆಯಬೇಕಾಯಿತು ಎಂದು ಹೇಳಿದರು.

ಕಾಂಗ್ರೆಸ್ ಪಕ್ಷ ಮೊದಲಿಂದ ದೇಶ ಪ್ರೇಮ ಮೆರೆಯುತ್ತ ಬಂದಿದೆ. ಈ ದೇಶವನ್ನು ಕಟ್ಟಿದೆ. ರಾಜ್ಯದ ಸಿದ್ದರಾಮಯ್ಯರ ಸರಕಾರ ಗ್ಯಾರಂಟಿಗಳ ಮೂಲಕ ಜನಮನವನ್ನು ಗೆದ್ದಿದೆ. ಬಡವರ ನಿತ್ಯ ಜೀವನಕ್ಕೆ ಸಹಾಯವಾಗಲಿ ಎಂದು ಭಾಗ್ಯಗಳನ್ನು ಕೊಟ್ಟಿದೆ. ಕೇಂದ್ರ ಸರಕಾರದ ಕೆಟ್ಟ ಆಡಳಿತದಿಂದ ಬೆಲೆ ಏರಿಕೆ, ಹಣದುಬ್ಬರ, ಜಿಎಸ್‌ಟಿ, ನೋಟ್ ಬಂದಿಯಿಂದ ಆರ್ಥಿಕ ಸ್ಥಿತಿ ಹದಗೆಟ್ಟು ಹೋಗಿತ್ತು. ಇದರಿಂದ ಸಾಮಾನ್ಯ ಜನ ತತ್ತರಿಸಿದ್ದರು. ಅವರಿಗೆಲ್ಲ ಗ್ಯಾರಂಟಿಗಳಿಂದ ಉಸಿರಾಡುವಂತಾಗಿದೆ ಎಂದರು.

ಜಿಲ್ಲೆಯ ಅಭಿವೃದ್ಧಿಗಾಗಿ ಆಲಗೂರರನ್ನು ಆಯ್ಕೆ ಮಾಡಿದರೆ ಒಳಿತಾಗಲಿದೆ. ದಶಕಗಳ ಕಾಲ ಈ ಲೋಕಸಭೆ ಕ್ಷೇತ್ರ ಏಳಿಗೆಯಿಂದ ವಂಚಿತವಾಗಿದೆ. ಕಾಂಗ್ರೆಸ್ ಇಲ್ಲಿ ಗೆಲ್ಲುವುದು ಖಚಿತ. ಆರಿಸಿ ಬಂದ ನಂತರ ನಿಮ್ಮ ಅಗತ್ಯಗಳಿಗೆ ನಮ್ಮ ಅಭ್ಯರ್ಥಿ ಸ್ಪಂದಿಸಲಿದ್ದಾರೆ ಎಂದು ಹೇಳಿದರು.

ಸಮಾಜ ಕಲ್ಯಾಣ ಸಚಿವ ಎಚ್.ಸಿ.ಮಹಾದೇವಪ್ಪ ಅವರು ಮಾತನಾಡಿ, ಆರು ಸಲ ಸಂಸದರಾಗಿದ್ದ ಜಿಗಜಿಣಗಿಯವರಿಂದ ಯಾವ ಕೆಲಸವೂ ಆಗಿಲ್ಲ. ಇವರು ಬೇಕೊ ಆಲಗೂರರು ಬೇಕೊ ನಿವೇ ನಿರ್ಧರಿಸಿ. ಪ್ರಜಾಪ್ರಭುತ್ವದ ಉಳಿವಿಗಾಗಿ ನೀವು ಕಾಂಗ್ರೆಸ್ ಬೆಂಬಲಿಸಬೇಕು. ದೇಶ ಸಂಕಷ್ಟದಲ್ಲಿದೆ. ದುರಾಡಳಿತ ಹೆಚ್ಚಿದೆ ಎಂದರು.

ಅಭ್ಯರ್ಥಿ ಪ್ರೊ.ರಾಜು ಆಲಗೂರ ಮಾತನಾಡಿ, ಬಿಜೆಪಿ ಹುರಿಯಾಳಾದ ಜಿಗಜಿಣಗಿಯವರು ಹತಾಶರಾಗಿದ್ದಾರೆ. ಸಹನೆ ಕಳೆದುಕೊಂಡು ಏನೇನೊ ಮಾತನಾಡುತ್ತಿದ್ದಾರೆ. ಇದು ಅವರ ಸೋಲಿನ ದಿಕ್ಸೂಚಿಯಾಗಿದೆ. ಮತದಾರರಾದ ನೀವು ನನ್ನನ್ನು ಆಯ್ಕೆ ಮಾಡಿದರೆ ನಿಮ್ಮ ವಿಶ್ವಾಸ ಉಳಿಸಿಕೊಳ್ಳುವೆ ಎಂದು ಹೇಳಿದರು.

ಮಾಜಿ ಜಿಪಂ ಸದಸ್ಯ ಕಲ್ಲು ದೇಸಾಯಿ ಪ್ರಸ್ತಾವಿಕ ಮಾತನಾಡಿ, ಕೊಲ್ಹಾರದ ಈ ಚುನಾವಣೆ ಮಹತ್ವದ್ದಾಗಿದೆ. ಈ ಚುನಾವಣೆಯಲ್ಲಿ ಬದಲಾವಣೆ ನಿಶ್ಚಿತ. ನಮ್ಮ ಕಾಂಗ್ರೆಸ್ ಅಭ್ಯರ್ಥಿ ಜಯಶಾಲಿ ಆಗುವುದರ ಮೂಲಕ ಜಿಲ್ಲೆಯ ಅಭಿವೃದ್ಧಿ ಸಾಧ್ಯವಾಗಲಿದೆ. ಜತೆಗೆ ಇದು ದೇಶದ ಭವಿಷ್ಯ ಬರೆಯುವ ಚುನಾವಣೆಯಾಗಿದೆ. ಬಸವನ ನಾಡಿನವರಾದ ನಾವು ಬಸವಣ್ಣನವರನ್ನು ಸಾಂಸ್ಕೃತಿಕ ನಾಯಕ ಎಂದು ಘೋಷಿಸಿದ್ದಕ್ಕೆ ಋಣಿಯಾಗಿ ಕಾಂಗ್ರೆಸ್‌ಗೆ ಮತ ಹಾಕೋಣ ಎಂದು ಹೇಳಿದರು.

ಪಕ್ಷದ ಅಧ್ಯಕ್ಷ ಮಲ್ಲಿಕಾರ್ಜುನ ಲೋಣಿ ಮಾತನಾಡಿ, ಆಲಗೂರರ ಗೆಲುವು ನೂರಕ್ಕೆ ನೂರು ಸಾಧ್ಯ. ಮಾತು ಕೊಟ್ಟಂತೆ ರಾಜ್ಯ ಸರಕಾರ ನಡೆದುಕೊಂಡಿದ್ದಕ್ಕೆ ಜನರ ಪ್ರೀತಿ ಗಳಿಸಿದೆ ಎಂದರು.

ಮುಖಂಡರಾದ ಶಿವನಗೌಡ ಗುಜಗೊಂಡ, ಸಿ.ಎಸ್. ಗಿಡ್ಡಪ್ಪಗೋಳ, ಬಿ.ಯು.ಗಿಡ್ಡಪ್ಪಗೋಳ, ಎಸ್.ಬಿ. ಪತಂಗಿ, ಆರ್. ಬಿ. ಪಕಾಲಿ, ಉಸ್ಮಾನ ಪಟೇಲ್, ವಿಜಯ ಮಹಾಂತೇಶ ಗಿಡ್ಡಪ್ಪಗೋಳ, ಎಂ.ಆರ್. ಕಲಾದಗಿ, ಶ್ರೀಶೈಲ ಗೌಡರ, ಡಾ.ಮೇತ್ರಿ ಅನೇಕರಿದ್ದರು. ಪುಟ್ಟು ಪಾಟೀಲ್ ನಿರೂಪಿಸಿದರು.

ಇದೇ ಸಂದರ್ಭ ಬಿಜೆಪಿ ಪಕ್ಷವನ್ನು ತೊರೆದು ಅನೇಕರು ಕಾಂಗ್ರೆಸ್ ಸೇರಿದರು.

## ಬಿಜೆಪಿ ರಾಜ್ಯ ಹಿಂದುಳಿದ ಮೋರ್ಚಾ ರಾಜ್ಯ ಉಪಾಧ್ಯಕ್ಷ ವಿವೇಕಾನಂದ ಡಬ್ಬಿ ವ್ಯಂಗ್ಯ

# ಬಿಜೆಪಿ ಸಾಧನೆಗಳ ಬಹಿರಂಗ ಚರ್ಚೆಗೆ ಕಾಂಗ್ರೆಸ್ ಸಿದ್ಧವಿಲ್ಲ

ಉದಯರಶ್ಮಿ ನ್ಯೂಸ್



ವಿಜಯಪುರ: ಕಾಂಗ್ರೆಸ್ ಸರ್ಕಾರದ ಸಾಧನೆ ಹಾಗೂ ಬಿಜೆಪಿ ಸರ್ಕಾರದ ಸಾಧನೆಗಳ ಬಗ್ಗೆ ಬಹಿರಂಗ ಚರ್ಚೆಗೆ ಶಾಮಿಯಾನ ಹಾಕಿ ಚರ್ಚೆ ನಡೆಸಲು ನಾವು ಅನೇಕ ಬಾರಿ ಆಹ್ವಾನಿಸಿದರೂ ಕಾಂಗ್ರೆಸ್ ಪಕ್ಷ ಆಹ್ವಾನ ಸ್ವೀಕರಿಸಲಿಲ್ಲ, ಏಕೆಂದರೆ ಕಾಂಗ್ರೆಸ್ ಪಕ್ಷಕ್ಕೆ ತಾನು ಏನು ಮಾಡಿಲ್ಲ ಎಂಬುದು ಗೊತ್ತಿದೆ ಎಂದು ಬಿಜೆಪಿ ರಾಜ್ಯ ಹಿಂದುಳಿದ ಮೋರ್ಚಾ ರಾಜ್ಯ ಉಪಾಧ್ಯಕ್ಷ ವಿವೇಕಾನಂದ ಡಬ್ಬಿ ವ್ಯಂಗ್ಯವಾಡಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಆಳ್ವಿಕೆಯಲ್ಲಿ ಕೇವಲ ನಾಲ್ಕು ನಗರಗಳಲ್ಲಿ ಮೆಟ್ರೋ ಸಂಚಾರ ಇತ್ತು, ಆದರೆ ಕೇವಲ 10 ವರ್ಷದ ಆಡಳಿತ ಅವಧಿಯಲ್ಲಿ 20 ನಗರರಗಳಲ್ಲಿ ಮೆಟ್ರೋ ಸಂಚಾರ ಆರಂಭವಾಗಿದೆ, ಕಾಂಗ್ರೆಸ್ 70 ವರ್ಷಗಳ ಆಡಳಿತದಲ್ಲಿ 628 ವಿಶ್ವವಿದ್ಯಾಲಯಗಳು ಮಾತ್ರ ಆರಂಭಗೊಂಡವು, ಆದರೆ ಮೋದಿಜಿ ಅವರು ಕೇವಲ 10 ವರ್ಷಗಳಲ್ಲಿ 1168 ಹೊಸ ವಿಶ್ವವಿದ್ಯಾಲಯ ಸ್ಥಾಪಿಸಿ ಉನ್ನತ ಶಿಕ್ಷಣಕ್ಕೆ ದೊಡ್ಡ ಕೊಡುಗೆ ನೀಡಿದ್ದಾರೆ ಎಂದರು.

ಕಳೆದ ಏಳು ದಶಕಗಳ ಕಾಂಗ್ರೆಸ್ ಆಳ್ವಿಕೆಯಲ್ಲಿ ಜನಸಂಖ್ಯೆಗೆ ಅನುಗುಣವಾಗಿ ಶಾಲೆ, ಆರೋಗ್ಯ ಸೌಲಭ್ಯ ಕಲ್ಪಿಸುವ ಯಾವ ಮುಂದಾಲೋಚನೆಯೂ ಕಾಂಗ್ರೆಸ್ ಬಳಿ ಇರದಿರುವುದು ದುರ್ದೈವ ಎಂದರು.

ಆದರೆ 130 ಕೋಟಿ ಜನಸಂಖ್ಯೆ ಇರುವ ದೇಶದಲ್ಲಿ ಕೋವಿಡ್ ದಾಳಿ ನಡೆಸಿದಾಗ ದಿಟ್ಟ ನಿರ್ಧಾರ ಕೈಗೊಂಡು ಜನರಲ್ಲಿ ಅಭಯ ತುಂಬಿದರು, ಉಚಿತವಾಗಿ ಪ್ರತಿಬಂಧಕ ಲಸಿಕೆ ಹಂಚಿದರು, 20 ಲಕ್ಷ ಕೋಟಿ ರೂ. ಗಳಷ್ಟು ಪ್ಯಾಕೇಜ್ ನೀಡಿದರು ಎಂದರು.

ಪಿ.ವಿ. ನರಸಿಂಹರಾವ್ ಅವರು ಪ್ರಧಾನಿಯಾಗಿದ್ದ ಸಂದರ್ಭದಲ್ಲಿ ಜಾಗತೀಕರಣ ನೀತಿ ಜಾರಿಗೊಂಡಿತು, ಆದರೆ ವಿಷಯದಲ್ಲಿ ಕಾಂಗ್ರೆಸ್ ಕೇವಲ ಆಮದು ಮಾಡುವದಕ್ಕೆ ಮಾತ್ರ ಸೀಮಿತವಾಯಿತು ಹೊರತು ರಫ್ತು ಮಾಡುವುದಕ್ಕೆ ಯಾವ ಯೋಚನೆಯೂ ಮಾಡಲಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಮೋದಿಜಿ ಆಡಳಿತದ ಕಾಲಘಟ್ಟದಲ್ಲಿ ಕೌಶಲ್ಯಾಧಾರಿತ ಯೋಜನೆ ಅನ್ವಯ ರಫ್ತುಉದ್ಯಮಕ್ಕೆ ಪ್ರೋತ್ಸಾಹ, ನವೋದ್ಯಮಗಳಿಗೆ ಆದ್ಯತೆ ನೀಡಿದರು ಎಂದು ಡಬ್ಬಿ ವಿವರಿಸಿದರು.

ಧುರೀಣರಾದ ರಾಜೇಶ ತಾವಸೆ, ವಿಜಯ ಜೋಶಿ , ಶ್ರೀಕಾಂತ ಶಿಂಧೆ, ಸಂತೋಷ ವೆಂಕಪ್ಪಗೋಳ ಮೊದಲಾದವರು ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

# ಆಲಮಟ್ಟಿ: ಬಲೆಗೆ ಬಿದ್ದ 35 ಕೆಜಿ ತೂಕದ ಮೀನು

**ಉದಯರಶ್ಮಿ ನ್ಯೂಸ್**

ಆಲಮಟ್ಟಿ: ಇಲ್ಲಿಯ ಕೃಷ್ಣಾ ನದಿಯ ಹಿನ್ನೀರಿನ ಬಾವಾಸಾಬ್ ಗುಡ್ಡದ ಬಳಿ ಸ್ಥಳೀಯ ಮೀನುಗಾರರೊಬ್ಬರಿಗೆ 35 ಕೆಜಿ ತೂಕದ ಬೃಹತ್ ಒಂದೇ ಮೀನು ಬಲೆಗೆ ಬಿದ್ದಿದೆ.

ಆಲಮಟ್ಟಿ ಗ್ರಾಮ ಪಂಚಾಯ್ತಿ ಸದಸ್ಯ ಮೀನುಗಾರ ಮಾಸೂಬಾ ಕಟ್ಟೀಮನಿ ಅವರ ಬಲೆಗೆ ಶನಿವಾರ ಈ ಬೃಹತ್ ಗಾತ್ರದ ಮೀನು ಬಿದ್ದಿದೆ.

ಶುಕ್ರವಾರ ಸಂಜೆ ಬಲೆ ಹಾಕಿ ಶನಿವಾರ ಬೆಳಿಗ್ಗೆ ಬಲೆ ತೆಗೆಯಲು ಹೋಗಿದ್ದ ಮಾಸೂಬಾ ಅವರಿಗೆ ಅಚ್ಚರಿ ಕಾದಿತ್ತು.

ನಂತರ ಬೃಹತ್ ಗಾತ್ರದ ಮೀನು ಬಲೆಗೆ ಬಿದ್ದಿದೆ ಎಂಬ ಊಹೆಯೊಂದಿಗೆ ಬಲೆಯನ್ನು ಸಾವಕಾಶವಾಗಿ ತೆಪ್ಪದಲ್ಲಿ ಮೀನಿನೊಂದಿಗೆ ಹಾಕಿ, ನದಿ ದಂಡೆಗೆ ತಂದು ಬಲೆಯಿಂದ ಮೀನನ್ನು ಬೇರ್ಪಡಿಸಲಾಯಿತು.

ಬೃಹತ್ ಗಾತ್ರದ ಮೀನು ನೋಡಲು ಜನ ತಂಡೋಪತಂಡವಾಗಿ ಆಗಮಿಸಿದರು.

ಇದು ಕಟ್ಲಾ ಜಾತಿಗೆ ಸೇರಿದ ಮೀನಾಗಿದ್ದು, 35 ಕೆಜಿ ತೂಕ ಹೊಂದಿದೆ, ನನಗೆ ತುಂಬಾ ಖುಷಿಯಾಗಿದೆ ಎಂದು ಮೀನುಗಾರ ಮಾಸೂಬಾ ಕಟ್ಟಿಮನಿ ಹೇಳಿದರು. ಈಗ ಕಟ್ಲಾ ಮೀನು ಹೆಚ್ಚಾಗಿ ಸಿಗುತ್ತವೆ, ತಿನ್ನಲು ರುಚಿಕರವಾಗಿರುವ ಕಟ್ಲಾ ಮೀನಿಗೆ ಸ್ಥಳೀಯ ಮಾರುಕಟ್ಟೆಯಲ್ಲಿ ಬೇಡಿಕೆಯಿದೆ ಎಂದು ಮಾಸೂಬಾ ತಿಳಿಸಿದರು. ಇವರ ಸಂಬಂಧಿ ಕುಮಾರ ಸಾಳೆ ಮೀನು ಹಿಡಿಯಲು ಸಹಕರಿಸಿದರು.



**6000 ರೂ ಗೆ ಮಾರಾಟ:** 170 ರೂ ಗೆ ಕೆಜಿ ದರದಂತೆ ಅಂದಾಜು 6000 ರೂ ಗೆ ಅರಳದಿನ್ನಿಯ ಸಗಟು ಮೀನು ವ್ಯಾಪಾರಿ ಮಹಾಂತೇಶ ಧನವೆ ಮೀನನ್ನು ಖರೀದಿಸಿದರು.

# ಜಿಗಜಿಣಗಿ ನೆನಪಿಡುವ ಯಾವ ಕೆಲಸಗಳನ್ನೂ ಮಾಡಿಲ್ಲ :ಎಂ.ಬಿ.ಪಾಟೀಲ

**ಉದಯರಶ್ಮಿ ನ್ಯೂಸ್**

ವಿಜಯಪುರ: ಅಧಿಕಾರದಲ್ಲಿದ್ದಾಗ ನಾವು ಮಾಡುವ ಕೆಲಸಗಳನ್ನು ಜನ ಸ್ಮರಿಸುವಂತಿರಬೇಕು. ಆದರೆ, ಸಂಸದ ರಮೇಶ ಜಿಗಜಿಣಗಿ ಜಿಲ್ಲೆಯ ಜನ ನೆನಪಿಡುವ ಯಾವ ಕೆಲಸಗಳನ್ನೂ ಮಾಡಿಲ್ಲ ಎಂದು ಎಂದು ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಹೇಳಿದ್ದಾರೆ.

ಶನಿವಾರ ಬಬಲೇಶ್ವರ ತಾಲೂಕಿನ ಚಿಕ್ಕಗಲಗಲಿ ಮತ್ತು ಕಂಬಾಗಿಯಲ್ಲಿ ಪ್ರೊ. ರಾಜು ಆಲಗೂರ ಪರ ಮತಯಾಚಿಸಿ ಅವರು ಮಾತನಾಡಿದರು.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಕಲಬುರಗಿ ಸಂಸದರಾಗಿ ಹೈದರಾಬಾದ ಕರ್ನಾಟಕಕ್ಕೆ ವಿಶೇಷ ಸ್ಥಾನಮಾನ ಕೊಡಿಸಿದರು. ಇಎ□□□ ಆಸ್ಪತ್ರೆ ನಿರ್ಮಿಸಿದರು. ಪ್ರಕಾಶ ಹುಕ್ಕೇರಿ ಸಂಸದರಾಗಿ ಚಿಕ್ಕೋಡಿ ಮತಕ್ಷೇತ್ರದಲ್ಲಿ ಸವಳು- ಜವಳು ಬಗೆ ಹರಿಸುವುದು ಸೇರಿದಂತೆ ಅನೇಕ ಸಮಸ್ಯೆಗಳನ್ನು ಬಗೆಹರಿಸಿದರು. ಇದರಿಂದಾಗಿ ಜನ ಈಗಲೂ ಅವರನ್ನು ಸ್ಮರಿಸುತ್ತಾರೆ. ಇವರ ಅಭಿವೃದ್ಧಿ ಕಾರ್ಯಗಳನ್ನು ನೋಡಿಯಾದರೂ ಸಂಸದ ರಮೇಶ ಜಿಗಜಿಣಗಿ ವಿಜಯಪುರದಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಮಾಡಿಸಬೇಕಿತ್ತು. ಯಾವುದೇ ಸಮಸ್ಯೆಗಳಿಗೆ ಸ್ಪಂದಿಸದಿದ್ದರೆ ಸಂಸತ್ತಿಗೆ ಹೋಗಿ ಪ್ರಯೋಜನವಾದರೂ ಏನೂ? ಎಂದು ಅವರು ಪ್ರಶ್ನಿಸಿದರು.



ಕೆಲವು ರಾಜ್ಯಗಳ ಆರ್ಥಿಕತೆ ಪ್ರವಾಸೋದ್ಯಮ ಮೇಲೆ ಹೆಚ್ಚು ಅವಲಂಬಿತವಾಗಿದೆ. ವಿಜಯಪುರ ಜಿಲ್ಲೆಯಲ್ಲಿಯೂ ಪ್ರವಾಸೋದ್ಯಮ, ತೋಟಗಾರಿಕೆ ಅಭಿವೃದ್ಧಿಗೆ ಸಾಕಷ್ಟು ಅವಕಾಶಗಳಿದ್ದರೂ ಸಂಸದರು ಸ್ಪಂದಿಸಿಲ್ಲ. ಕೆಲಸ ಮಾಡದವರು ಸಾಕು. ಕ್ರಿಯಾಶೀಲರಾದ ಹೊಸಬರಿಗೆ ಅವಕಾಶ ನೀಡೋಣ. ಪ್ರೊ. ರಾಜು ಆಲಗೂರ ಅವರನ್ನು ಮತಹಾಕಿ ಗೆಲ್ಲಿಸಿ. ಅಭಿವೃದ್ಧಿ ಮಾಡಿಸುವುದು ನನ್ನ ಗ್ಯಾರಂಟಿ ಎಂದು ಸಚಿವರು ತಿಳಿಸಿದರು.

ಪ್ರೊ. ರಾಜು ಆಲಗೂರ ಅವರು ವಿಜಯಪುರದ ಸರ್ವಾಂಗೀಣ ಅಭಿವೃದ್ಧಿಗೆ ಅವರದೇ ಆದ ವಿಜನ್ ಹೊಂದಿದ್ದು, ಈಗಾಗಲೇ 10 ಅಂಶಗಳ ಪ್ರಣಾಳಿಕೆ ಪ್ರಕಟಿಸಿದ್ದಾರೆ. ಸರಳ, ಸಜ್ಜನ, ಯಾರಿಗೂ ಕೆಟ್ಟದ್ದನ್ನು ಮಾಡದ, ಕ್ರಿಯಾಶೀಲ ವ್ಯಕ್ತಿಯಾಗಿರುವ ಅವರಿಗೆ ಮತ ಹಾಕಿ ಗೆಲ್ಲಿಸಬೇಕು ಎಂದು ಹೇಳಿದರು.

ಈ ವೇಳೆ ನಂದಿ ಸಹಕಾರಿ ಸಕ್ಕರೆ ಕಾರ್ಖಾನೆ ನಿರ್ದೇಶಕರ ಸಂಗನಗೌಡ ಪಾಟೀಲ ಚಿಕ್ಕಗಲಗಲಿ, ಕಾಂಗ್ರೆಸ್ ಮುಖಂಡರಾದ ಬಸನಗೌಡ ಪಾಟೀಲ ಹೊಸೂರ, ಎಸ್. ಎಂ. ಸೊನ್ನದ, ಎಂ. ಕೆ. ಶಿವಣ್ಣವರ, ಸಂಜು ಕಂಬಾಗಿ ಮಾತನಾಡಿ, ಈ ಬಾರಿ ಕಾಂಗ್ರೆಸ್ ಅಭ್ಯರ್ಥಿ ಪ್ರೊ. ರಾಜು ಆಲಗೂರ ಅವರನ್ನು ಗೆಲ್ಲಿಸೋಣ. ಸಚಿವ ಎಂ. ಬಿ. ಪಾಟೀಲ ಅವರ ಕೈ ಬಲಪಡಿಸೋಣ ಎಂದು ಮಾಡಿದರು.

ಈ ಸಂದರ್ಭದಲ್ಲಿ ಎಲ್. ಎಸ್. ನಿಡೋಣಿ, ಲಕ್ಷ್ಮಣ ಚಿಗದಾನಿ, ಪಾಂಡುಗೌಡ ಬಿರಾದಾರ, ವಿ. ಎಚ್. ಪಾಟೀಲ, ರಮೇಶ ಯರಗಟ್ಟಿ, ಸಂಜುಗೌಡ ಪಾಟೀಲ, ಎಂ. ಬಿ. ಮದರಖಂಡಿ, ಕೆ. ಎಂ. ಮಠಪತಿ, ರಂಗನಗೌಡ ಕ. ಬಿರಾದಾರ, ಅಪ್ಪಾಸಾಹೇಬಗೌಡ ಪಾಟೀಲ, ಮಲ್ಲಿಕಾರ್ಜುನ ಅಂಗಡಿ, ಮಹಾಳಿಂಗರಾಯ ಮಹಾರಾಜರು ಮುಂತಾದವರು ಉಪಸ್ಥಿತರಿದ್ದರು.

## ಲೋಕಸಭಾ ಚುನಾವಣೆ: ಸ್ವೀಪ್ ಸಮಿತಿಯಿಂದ ವಿನೂತನ ಜಾಗೃತಿ ಕಾರ್ಯಕ್ರಮ

# ಮತದಾನ ಜಾಗೃತಿಯ ಟಾಂಗಾ ಅಭಿಯಾನಕ್ಕೆ ಚಾಲನೆ

**ಉದಯರಶ್ಮಿ ನ್ಯೂಸ್**

ವಿಜಯಪುರ: ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಮತದಾರರಲ್ಲಿ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಶನಿವಾರ ಸಂಜೆ ನಗರದ ಸೆಟ್ ಲೈಟ್ ಬಸ್ ನಿಲ್ದಾಣ ( ಹೊಸ ಬಸ್ ನಿಲ್ದಾಣ)ದಿಂದ ಹಮ್ಮಿಕೊಂಡ ಐತಿಹಾಸಿಕ ಪಾರಂಪರಿಕ ಟಾಂಗಾ ಅಭಿಯಾನಕ್ಕೆ ಚಾಲನೆ ನೀಡಲಾಯಿತು.



ಸಾರ್ವತ್ರಿಕ ಲೋಕಸಭಾ ಚುನಾವಣೆ 2024 ರ ಮತದಾನ ಮಹತ್ವ ಕುರಿತು ಜನರಲ್ಲಿ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಜಿಲ್ಲಾ ಪಂಚಾಯತ್, ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಹಮ್ಮಿಕೊಂಡ ಜಾಗೃತಿಯ ಟಾಂಗಾ ಅಭಿಯಾನವನ್ನು ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರಾದ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ ಅವರು ವಿಶೇಷವಾಗಿ ಅಲಂಕೃತಗೊಂಡ ಪಾರಂಪರಿಕ ಟಾಂಗಾದಲ್ಲಿ ಕುಳಿತು ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು.

ಮತದಾನ ಜಾಗೃತಿ ವಿವಿಧ ಘೋಷಣೆಗಳನ್ನೊಂಡ ಅಲಂಕೃತವಾಗಿರುವ ಟಾಂಗಾದಲ್ಲಿ ಸ್ವತ: ರಿಷಿ ಆನಂದ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ರಾಯಭಾರಿಗಳಾದ ಸಹನಾ ಕೂಡಿಗನೂರ, ಸಾಕ್ಷಿ ಹಿರೇಮಠ ಸೇರಿದಂತೆ ಇತರ ಅಧಿಕಾರಿಗಳು, ಸ್ವೀಪ್ ಸಮಿತಿ ಸದಸ್ಯರು ಕುಳಿತು ನಗರದಾದ್ಯಂತ ಸಂಚರಿಸುವ ಮೂಲಕ ಮತದಾನ ಜಾಗೃತಿಯೊಂದಿಗೆ ಮತದಾರರಲ್ಲಿ ಉತ್ಸಾಹ ಹುಮ್ಮಸ್ಸು ಮೂಡಿಸಿ,ಪ್ರಜಾಪ್ರಭುತ್ವದ ಹಬ್ಬದಲ್ಲಿ ಭಾಗವಹಿಸಿ ಮತದಾನ ಮಾಡುವಂತೆ ಪ್ರೇರೇಪಿಸಿದರು. ಜಾಥಾುದ್ದಕ್ಕೂ ಡೊಳ್ಳು ಬಾರಿಸುವುದು ಆಕರ್ಷಣೀಯವಾಗಿತ್ತು.

40 ಟಾಂಗಾಗಳನ್ನೊಳಗೊಂಡ ಟಾಂಗಾ ಜಾಥಾವು ನಗರದ ಸೆಟ್ ಲೈಟ್ ಬಸ್ ನಿಲ್ದಾಣದಲ್ಲಿ ( ಹೊಸ ಬಸ್ ನಿಲ್ದಾಣ)ದಿಂದ ಆರಂಭಗೊಂಡು, ವಿಜಯಪುರದ ಗ್ಯಾಂಗ್ ಬಾವಡಿ, ಮಹಾತ್ಮಾ ಗಾಂಧಿ ಶಾಲೆ, ಮಾನಸ ರೆಸಿಡೆನ್ಸಿ, ದರ್ಗಾ ಕ್ರಾಸ್, ಚಾಲುಕ್ಯ ನಗರ, ಉಮದಿ ಸೂಪರ್ ಬಜಾರ್ ಎದುರಿನ ರಸ್ತೆ, ಮಹೇಶ್ವರಿ ಭವನ ರಸ್ತೆ, ರೀಲೈನ್ಸ್ ಮಾಲ್ ರಸ್ತೆ, ಮಾರವಾಡಿ ಕಾಲೋನಿ, ಸಿದ್ದೇಶ್ವರ ದೇವಸ್ಥಾನ, ಗಾಂಧಿ ವೃತ್ತ ಮಾರ್ಗವಾಗಿ ಸಂಚರಿಸಿ ಡಾ.ಬಿ.ಆರ್.ಅಂಬೇಡ್ಕರ್ ವೃತ್ತಕ್ಕೆ ತಲುಪಿ ಸಮಾವೇಶಗೊಂಡಿತು.

ಟಾಂಗಾ ಜಾಥಾವು 8 ರಿಂದ 10 ಕಿ.ಮೀ.ವರೆಗೆ ಸಂಚರಿಸಿ ಜಾಗೃತಿ ಮೂಡಿಸಿತು. ರಸ್ತೆಯುದ್ದಕ್ಕೂ 'ಮಾಡಲೇಬೇಕು-ಮಾಡಲೇಬೇಕು ಮತದಾನ ಮಾಡಲೇಬೇಕು' ನಮ್ಮ ಮತ ನಮ್ಮ ಹಕ್ಕು, 'ಮೇ.7ರಂದು ಕಡ್ಡಾಯವಾಗಿ ಮತದಾನ ಮಾಡಿ' 'ಚುನಾವಣಾ ಪರ್ವ ನಮ್ಮ ಗರ್ವ' ಹೀಗೆ ಹತ್ತು ಹಲವಾರು ಮತದಾನ ಜಾಗೃತಿಯ ಘೋಷಣೆಗಳನ್ನು ಕೂಗಲಾಯಿತು.

ನಗರದ ಡಾ.ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ನಡೆದ ಕಾರ್ಯಕ್ರಮದಲ್ಲಿ ಉಪ ಆಯುಕ್ತ ಮಹಾವೀರ ಬೋರಣ್ಣವರ ನೆರೆದ ಎಲ್ಲರಿಗೂ ಮತದಾನ ಪ್ರತಿಜ್ಞಾವಿಧಿ ಬೋಧಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರೂ ಆದ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ ಅವರು ಮಾತನಾಡಿ, ಮತದಾನ ಅತ್ಯಂತ ಅಮೂಲ್ಯವಾದದ್ದು, ನನ್ನ ಒಂದು ಮತದಿಂದ ಏನಾಗುತ್ತದೆ ಎಂಬ ಅಸಡ್ಡೆ ಭಾವನೆ ತೋರಬಾರದು. ಒಂದು ಮತಕ್ಕೆ ದೇಶ ಕಟ್ಟುವ ಶಕ್ತಿಯಿದೆ. ಮತದಾರ ಪಟ್ಟಿಯಲ್ಲಿ ಹೆಸರು ನೊಂದಾಯಿಸಿಕೊಂಡ 18 ವರ್ಷ ಮೇಲ್ಪಟ್ಟ ಎಲ್ಲ ಮತದಾರರು ಮೇ.7 ರಂದು ನಡೆಯುವ ಪ್ರಜಾಪ್ರಭುತ್ವ ಹಬ್ಬದಲ್ಲಿ ಭಾಗವಹಿಸಿ ಕಡ್ಡಾಯವಾಗಿ ಮತದಾನ ಮಾಡುವ ಮೂಲಕ ಸುಭದ್ರ ರಾಷ್ಟ್ರ ನಿರ್ಮಾಣದಲ್ಲಿ ಕೈ ಜೋಡಿಸುವಂತೆ ಕರೆ ನೀಡಿದರು.

ದೇಶದ ಪ್ರಗತಿಯಲ್ಲಿ ಪ್ರತಿಯೊಬ್ಬ ನಾಗರಿಕರ ಪಾತ್ರ ಅತ್ಯಂತ ಮುಖ್ಯವಾಗಿದೆ. ದೇಶ ಕಟ್ಟಲು ಪ್ರತಿಯೊಬ್ಬರ ಮತ ಅಮೂಲ್ಯವಾಗಿದೆ. ದೇಶದ ಹಿತದೃಷ್ಟಿಯಿಂದ ಪ್ರತಿಯೊಬ್ಬರು ಪ್ರಜಾಪ್ರಭುತ್ವ ಹಬ್ಬದಲ್ಲಿ ಭಾಗವಹಿಸಿ ತಮ್ಮ ಕರ್ತವ್ಯ ನಿಭಾಯಿಸುವುದಲ್ಲದೇ ತಮ್ಮ ನೆರೆ ಹೊರೆಯವರನ್ನು ಮತದಾನಕ್ಕೆ ಪ್ರೇರೆಪಿಸಬೇಕು ಎಂದು ಅವರು ಹೇಳಿದರು.

ಇದೇ ಸಂದರ್ಭದಲ್ಲಿ ಮತದಾನ ಜಾಗೃತಿಯಲ್ಲಿ ಶ್ರಮಿಸಿದ ಸ್ವೀಪ್ ಅಧಿಕಾರಿಗಳು, ಜಿಲ್ಲಾ ಮಟ್ಟದ ವಿವಿಧ ಅಧಿಕಾರಿಗಳು, ಮಹಾನಗರ ಪಾಲಿಕೆ ಅಧಿಕಾರಿಗಳು ಸೇರಿದಂತೆ ಟಾಂಗಾ ಅಭಿಯಾನದಲ್ಲಿ ಭಾಗವಹಿಸಿ ಟಾಂಗಾ ಚಾಲಕರಿಗೆ ಅವರು ಕೃತಜ್ಞತೆಯನ್ನು ಸಲ್ಲಿಸಿದರು.

ಜಾಥಾ ಕಾರ್ಯಕ್ರಮದಲ್ಲಿ ಸ್ವೀಪ್ ಜಿಲ್ಲಾ ನೋಡಲ್ ಅಧಿಕಾರಿ ಸಿ ಆರ್ ಮುಂಡರಗಿ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ನಿಂಗಪ್ಪ ಗೋಠೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಬಸವರಾಜ ಹುಬ್ಬಳ್ಳಿ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ಸೇರಿ ಇತರರು ಉಪಸ್ಥಿತರಿದ್ದರು.

# ಮೇ.5 ರಿಂದ 7 ರವರೆಗೆ ಕಲಂ 144 ಜಾರಿ

**ಉದಯರಶ್ಮಿ ನ್ಯೂಸ್**

ವಿಜಯಪುರ: ಲೋಕಸಭಾ ಸಾರ್ವತ್ರಿಕ ಚುನಾವಣೆ 2024ರ ಹಿನ್ನೆಲೆಯಲ್ಲಿ ಮೇ.7ರಂದು ಮತದಾನ ನಡೆಯಲಿದ್ದು, ಜಿಲ್ಲೆಯ ಎಲ್ಲಾ 2085 ಮತಗಟ್ಟೆಗಳಲ್ಲಿ ಮುಕ್ತ, ಶಾಂತಿಯುತ ಹಾಗೂ ಪಾರದರ್ಶಕವಾಗಿ ಚುನಾವಣೆ ನಡೆಸುವ ಹಿನ್ನಲೆಯಲ್ಲಿ ಮೆ.5 ರ ಸಂಜೆ 6 ರಿಂದ ಮೇ 7 ರಂದು ಮತದಾನ ಮುಕ್ತಾಯವಾಗುವವರೆಗೆ ಜಿಲ್ಲೆಯಾದ್ಯಂತ ಕಲಂ 144 ಪ್ರತಿಭಂದಕಾಜ್ಞೆ ಜಾರಿ ಮಾಡಿ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿಯಾದ ಟಿ.ಭೂಬಾಲನ್ ಆದೇಶ ಹೊರಡಿಸಿದ್ದಾರೆ.

ಮೇ 5 ರಂದು ಸಂಜೆ 6 ರಿಂದ ಮತದಾನ ಮುಗಿಯವವರೆಗೂ 5ಕ್ಕಿಂತ ಹೆಚ್ಚು ಜನರು ಗುಂಪು ಗುಂಪು ಸೇರುವುದು, ಮೆರವಣಿಗೆ, ಸಭೆ ಸಮಾರಂಭ ಜರಗಿಸುವುದು ನಿಷೇಧಿಸಿದೆ. ಅದಲ್ಲದೇ, ಶಸ್ತ್ರಾಸ್ತ್ರಗಳನ್ನು ತೆಗೆದುಕೊಂಡು ಸಂಚರಿಸುವುದು, ಮತಗಟ್ಟೆಗಳ 100 ಮೀಟರ್ ಸುತ್ತಮುತ್ತ ರಾಜಕೀಯ ಪಕ್ಷಗಳ ಪೋಸ್ಟರ್, ಬ್ಯಾನರ್ ಹಾಗೂ ಪ್ರಚಾರ, . ಸಾರ್ವಜನಿಕವಾಗಿ ಪ್ರಚೋಧನಕಾರಿ ಹೇಳಿಕೆ, ವ್ಯಕ್ತಿಗಳ ತೇಜೋವಧೆ, ಮತಗಟ್ಟೆಯ ಸುತ್ತಮುತ್ತ ಧ್ವನಿವರ್ಧಕಗಳನ್ನು ಬಳಸುವುದನ್ನು ಸಂಪೂರ್ಣವಾಗಿ ನಿಷೇಧಿಸಿಸಲಾಗಿದೆ.

ಮೇ 6, 7 ರಂದು ಸಂತೆ , ಜಾತ್ರೆ , ಉತ್ಸವ ನಿಷೇಧ

ವಿಜಯಪುರ ಮೇ 4 (ಕರ್ನಾಟಕ ವಾರ್ತೆ): ಲೋಕಸಭಾ ಸಾರ್ವತ್ರಿಕ ಚುನಾವಣೆ 2024ರ ಹಿನ್ನೆಲೆಯಲ್ಲಿ ಜಿಲ್ಲೆಯ ಎಲ್ಲಾ 2085 ಮತಗಟ್ಟೆಗಳಲ್ಲಿ ಮುಕ್ತ, ಶಾಂತಿಯುತ ಹಾಗೂ ಪಾರದರ್ಶಕವಾಗಿ ಚುನಾವಣೆ ನಡೆಸುವ ದೃಷ್ಟಿಯಿಂದ ಮತದಾನದ ಹಿಂದಿನ ದಿನ ಮೇ.6 ಹಾಗೂ ಮತದಾನ ದಿನವಾದ ಮೇ 7 ರಂದು ಜಿಲ್ಲೆಯಾದ್ಯಂತ ಸಂತೆ, ಜಾತ್ರೆ, ಉತ್ಸವಗಳನ್ನು ನಿಷೇಧಿಸಿ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿಯಾದ ಟಿ. ಭೂಬಾಲನ್ ಅವರು ಆದೇಶ ಹೊರಡಿಸಿದ್ದಾರೆ.

# ಮನೆಮನೆಗೆ ತೆರಳಿ ಬಿಜೆಪಿ ಪರ ಮತಯಾಚನೆ



**ಉದಯರಶ್ಮಿ ನ್ಯೂಸ್**

ವಿಜಯಪುರ: ಲೋಕಸಭಾ ಚುನಾವಣೆ ಹಿನ್ನೆಲೆ ವಿಜಯಪುರ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ರಮೇಶ ಜಿಗಜಿಣಗಿ ಪರವಾಗಿ ನಗರದ ವಾರ್ಡ್ ಸಂಖ್ಯೆ 3 ರ ಭಾವಸಾರ ನಗರದಲ್ಲಿ ಪಾಲಿಕೆ ಮಾಜಿ ಸದಸ್ಯ, ಬಿಜೆಪಿ ಮುಖಂಡ ಉಮೇಶ ವಂದಾಲ ನೇತೃತ್ವದಲ್ಲಿ ಮನೆಮನೆಗೆ ತೆರಳಿ ಕರಪತ್ರ ಹಂಚುವ ಮೂಲಕ ಬಿಜೆಪಿ ಪರ ಮತಯಾಚಿಸಲಾಯಿತು.

ಈ ವೇಳೆ ಬಿಜೆಪಿ ಮುಖಂಡರಾದ ಶ್ರೀಧರ ಪಾಣೆಗಾವಿ, ಈಶ್ವರ ಬಸವರಾಜ, ನಿಖಿಲ ಚಿನಿವಾಲ, ಶಾಮ ಸೂರ್ಯವಂಶಿ, ಶಶಿಕುಮಾರ ಸನಕಿ, ಹರ್ಷಿತ್, ಜಾಧವ, ಕಂಪ್ಲಿ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ಉದಯರಶ್ಮಿ
ಪ್ರತಿ ಮನೆ-ಮನದ ಸಂಗಾತಿ

# ದೇವರಹಿಪ್ಪರಗಿಯಲ್ಲಿ ಬಸನಗೌಡ ಯತ್ನಾಳ ರೋಡ್ ಶೋ

**ಉದಯರಶ್ಮಿ ನ್ಯೂಸ್**

ದೇವರಹಿಪ್ಪರಗಿ: ದೇಶದ ಸಮಸ್ತ ಜನತೆಗೆ ನೀಡಿದ ಎಲ್ಲಾ ಭರವಸೆಗಳು ಸೇರಿದಂತೆ ಜನಪರ ಯೋಜನೆಗಳನ್ನು ಅನುಷ್ಠಾನಗೊಳಿಸುವ ಮೂಲಕ ಮೂರನೆಯ ಬಾರಿಗೆ ಪ್ರಧಾನಿ ಮೋದಿಜಿ ಗದ್ದುಗೆಯೇರುವುದು ನಿಶ್ಚಿತ ಎಂದು ವಿಜಯಪುರ ಮತಕ್ಷೇತ್ರದ ಶಾಸಕ ಬಸನಗೌಡ ಪಾಟೀಲ (ಯತ್ನಾಳ) ಹೇಳಿದರು.



ಪಟ್ಟಣದಲ್ಲಿ ಶನಿವಾರ ಬಿಜೆಪಿ ಅಭ್ಯರ್ಥಿ ರಮೇಶ ಜಿಗಜಿಣಗಿ ಪ್ರಚಾರದ ಅಂಗವಾಗಿ ಜರುಗಿದ ರೋಡ್ ಶೋದಲ್ಲಿ ಪಾಲ್ಗೊಂಡು ಮಾತನಾಡಿದರು. ಪ್ರಧಾನಿ ಮೋದಿಯವರ ಸಮರ್ಥ ನಾಯಕತ್ವದಲ್ಲಿ ಇಂದು ಭಾರತ ಪ್ರಬಲ ಆರ್ಥಿಕಶಕ್ತಿಯಾಗಿ ಬೆಳೆದು ನಿಂತಿದೆ. ನೆರೆಯ ಬದ್ಧವೈರಿ ಪಾಕಿಸ್ತಾನ ಜನತೆ ಕೂಡಾ ಮೋದಿಯವರನ್ನು ಕೊಂಡಾಡುತ್ತಿದೆ. ಇಂದು ಭಾರತದಲ್ಲಿ ದೇಶವಿರೋಧಿ ಚಟುವಟಿಕೆಗಳಿಗೆ ಕಾಂಗ್ರೆಸ್ ಅವಕಾಶ ನೀಡುತ್ತಿದೆ. ಇದಕ್ಕೆ ವಿಧಾನಸೌಧದಲ್ಲಿ ವಿರೋಧಿ ರಾಷ್ಟ್ರಪರ ಜಿಂದಾಬಾದ್ ಹಾಗೂ ಹುಬ್ಬಳ್ಳಿಯಲ್ಲಿ ನಡೆದ ವಿದ್ಯಾರ್ಥಿನೀಯ ಹತ್ಯೆ ಪ್ರಕರಣಗಳೇ ಸಾಕ್ಷಿ. ಇಂಥ ಘಟನೆಗಳನ್ನು ಕಾಂಗ್ರೆಸ್ ನಾಯಕರು ಪದೇಪದೇ ಸಮರ್ಥನೆ ಮಾಡಿಕೊಳ್ಳುತ್ತಿರುವುದು ಕಾಂಗ್ರೆಸ್ ಪಕ್ಷದ ದೇಶ ವಿರೋಧಿನೀತಿಗೆ ನಿದರ್ಶನವಾಗಿದೆ ಎಂದು ಹೇಳುತ್ತಾ ಡಿ.ಕೆ.ಶಿವಕುಮಾರ, ಶಿವಾನಂದ ಪಾಟೀಲರ ಹೇಳಿಕೆಗಳ ಕುರಿತು ಅಸಮಾಧಾನ ವ್ಯಕ್ತಪಡಿಸಿದರು. ಜೊತೆಗೆ ನೋಟ್‌ಬ್ಯಾನ್ ನಂತರ ಪಾಕಿಸ್ತಾನದ ದಿವಾಳಿತನ, ಪಾಕಿಸ್ತಾನದಲ್ಲಿ ಆಗುತ್ತಿರುವ ಭಾರತ ವಿರೋಧಿ ಭಯೋತ್ಪಾದಕರ ಮಾರಣ ಹೋಮದ ಕುರಿತು ಮಾತನಾಡಿ ಮೂರನೆಯ ಬಾರಿಗೆ ಮೋದಿಜಿ ಪ್ರಧಾನಿಯಾಗುವುದು ನಿಶ್ಚಿತ ಆದ್ದರಿಂದ ಬಿಜೆಪಿ ಬೆಂಬಲಿಸಲು ಕರೆ ನೀಡಿದರು

ಮಾಜಿಶಾಸಕ ಸೋಮನಗೌಡ ಪಾಟೀಲ(ಸಾಸನೂರ) ಮಾತನಾಡಿ, ಧರ್ಮ ಹಾಗೂ ಅಧರ್ಮಗಳ ನಡುವಿನ ಹೋರಾಟದಲ್ಲಿ ಧರ್ಮದ ಪರ ನಿಲ್ಲಬೇಕಾಗಿದೆ. ಆದ್ದರಿಂದ ತಾವೆಲ್ಲ ಬಿಜೆಪಿಯನ್ನು ಬೆಂಬಲಿಸುವ ಮೂಲಕ ಸಮೃದ್ಧ, ಸಶಕ್ತ ಭಾರತ ನಿರ್ಮಾಣಕ್ಕಾಗಿ ರಮೇಶ ಜಿಗಜಿಣಗಿ ಅವರಿಗೆ ಮತ ನೀಡೋಣ ಎಂದರು.

ರೋಡ್ ಶೋ ಆರಂಭದಲ್ಲಿ ಬಿಜೆಪಿ ಪ್ರಮುಖರಾದ ಬಸನಗೌಡ ಪಾಟೀಲ(ನಾಗರಾಳ ಹುಲಿ), ಪ್ರಭುಗೌಡ ಬಿರಾದಾರ(ಅಸ್ಕಿ), ಸಿದ್ದು ಬುಳ್ಳಾ, ಶಿಲ್ಪಾ ಕುದರಗೊಂಡ, ಶಿವರಾಜ ತಳವಾರ ಮಾತನಾಡಿದರು. ಸುಡುಬಿಸಿಲಿನಲ್ಲಿ ಆರಂಭವಾದ ರೋಡ್ ಶೋ ಪಟ್ಟಣದ ಪ್ರಮುಖ ಬೀದಿಗಳ ಮೂಲಕ ಹಾದು ಕರಿಸಿದ್ಧೇಶ್ವರ ದೇವಸ್ಥಾನದ ಮುಂದೆ ಸಮಾರೋಪಗೊಂಡಿತು.

ಜಿಲ್ಲಾ ಕಾರ್ಯದರ್ಶಿ ರಮೇಶ ಮಸಬಿನಾಳ, ಮಂಡಲ ಅಧ್ಯಕ್ಷ ಅವ್ವಣ್ಣ ಗ್ವಾತಗಿ, ಮತಕ್ಷೇತ್ರದ ಜೆಡಿಎಸ್ ಅಧ್ಯಕ್ಷ ಸಾಯಬಣ್ಣ ಬಾಗೇವಾಡಿ, ಭೀಮನಗೌಡ ಸಿದರಡ್ಡಿ, ಕಾಸುಗೌಡ ಜಲಕತ್ತಿ, ಗಾಯತ್ರಿ ದೇವೂರ, ಪ್ರಕಾಶ ದೊಡಮನಿ, ಭೀಮನಗೌಡ ಲಚ್ಯಾಣ, ಸೋಮಶೇಖರ ಹಿರೇಮಠ, ಸೋಮು ದೇವೂರ, ಮಹಾಂತೇಶ ಬಿರಾದಾರ, ಶ್ರೀಮಂತ ತಳವಾರ, ಬಸವರಾಜ ಕಲ್ಲೂರ, ಬಾಬುಗೌಡ ಹರನಾಳ, ಕಾಶೀಪತಿ ಕುದರಿ, ಸುನೀಲ ಮಾಗಿ ಸೇರಿದಂತೆ ಬಿಜೆಪಿ, ಜೆಡಿಎಸ್ ಕಾರ್ಯಕರ್ತರು, ಪದಾಧಿಕಾರಿಗಳು ಇದ್ದರು.

# ದೇಶದ ಹಿತಕ್ಕಾಗಿ ಈ ಬಾರಿಯೂ ಬಿಜೆಪಿ ಬೆಂಬಲಿಸಿ :ಜೋಶಿ

**ಉದಯರಶ್ಮಿ ನ್ಯೂಸ್**

ವಿಜಯಪುರ: ಕಳೆದ 25 ವರ್ಷಗಳಿಂದ ವಿಜಯಪುರ ಜಿಲ್ಲೆಯ ಪ್ರಬುದ್ಧ ಮತದಾರರು ಯಾವುದೇ ಜಾತಿ, ಮತ, ಪಂಥ ನೋಡದೇ ಜಾತಿಗಿಂತ ದೇಶದ ಹಿತವೇ ಮುಖ್ಯ ಎಂದು ಸತತವಾಗಿ ಬಿಜೆಪಿಗೆ ಬೆಂಬಲಿಸುತ್ತಾ ಬಂದಿದ್ದಾರೆ. ಈ ಬಾರಿಯು ಮೇ.7 ರಂದು ಜರುಗುವ ಲೋಕಸಭಾ ಚುನಾವಣೆಯಲ್ಲಿ ವಿಜಯಪುರ ಮತದಾರರು ಬಿಜೆಪಿ ಅಭ್ಯರ್ಥಿಯಾಗಿರುವ ಹಿರಿಯ ಸಂಸದ ರಮೇಶ ಜಿಗಜಿಣಗಿ ಅವರಿಗೆ ಮತ ಹಾಕುವ ಮೂಲಕ ಜಾತಿಗಿಂತ ದೇಶದ ಹಿತವೇ ಮುಖ್ಯ ಎಂಬುದನ್ನು ಮತ್ತೊಮ್ಮೆ ಸಾಬೀತುಪಡಿಸಿ ಮಾದರಿಯಾಗಬೇಕು ಎಂದು ಬಿಜೆಪಿ ಜಿಲ್ಲಾ ಮಾಧ್ಯಮ ಪ್ರಮುಖ ವಿಜಯ್ ಜೋಶಿ ಮನವಿ ಮಾಡಿಕೊಂಡಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ದೇಶದ ಹೆಮ್ಮೆಯ ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದ ಬಿಜೆಪಿ ಸರ್ಕಾರದಲ್ಲಿ ಗೂಡ್ಸ್ ರೈಲಿನಂತೆ ನಿಧಾನಗತಿಯಲ್ಲಿದ್ದ ದೇಶದ ಆರ್ಥಿಕ ಬೆಳವಣಿಗೆ ವಂದೇ ಭಾರತ್ ರೈಲಿನಷ್ಟೇ ವೇಗ ಪಡೆದುಕೊಂಡಿದೆ. ಎಲ್ಲದಕ್ಕೂ ಮೇಡ್ ಇನ್ ಚೈನಾ ಎನ್ನುತ್ತಿದ್ದವರನ್ನು ಹೊಡೆದೋಡಿಸಿ ಮೇಕ್ ಇನ್ ಇಂಡಿಯಾ ಎನ್ನುವಂತೆ ಮಾಡಿದ್ದಾರೆ. ಪ್ರಭು ಶ್ರೀರಾಮನ ಅಸ್ತಿತ್ವ ಪ್ರಶ್ನಿಸುತ್ತಿದ್ದವರ ಬಾಯಲ್ಲೇ ಜೈ ಶ್ರೀರಾಮ ಎನ್ನುವಂತೆ ಮಾಡಿದ್ದಾರೆ. ದೇಶದಲ್ಲಿ ನುಸುಳಿ ರಾಜರೋಷವಾಗಿ ಭಯೋತ್ಪಾದಕ ಕೃತ್ಯ ನಡೆಸುತ್ತಿದ್ದವರ ಅಡುಗುತಾಣಕ್ಕೆ ನುಗ್ಗಿ ಸರ್ಜಿಕಲ್ ಸ್ಟ್ರೈಕ್ ನಡೆಸಿ ಭಾರತವೆಂದರೆ ಭಯೋತ್ಪಾದಕರಲ್ಲೂ ಭಯ ನಡುಕ ಹುಟ್ಟಿಸಿದ್ದಾರೆ.



ದೇಶದ ಸುರಕ್ಷತೆ ಹಾಗೂ ನಮ್ಮ ಹಿಂದೂ ಸಂಸ್ಕೃತಿ, ಪರಂಪರೆ ಉಳಿಸುವ ಆಶಯದಿಂದ ಜನ ಜಾತಿಯನ್ನು ನೋಡದೆ ದೇಶದ ಹಿತವನ್ನೇ ಬಯಸಿದ ಕಾರಣದಿಂದಾಗಿ ದೇಶದಲ್ಲಿ ಕಳೆದ ಹತ್ತು ವರ್ಷಗಳಿಂದ ಬಿಜೆಪಿ ಸಶಕ್ತವಾಗಿ ನಿಂತಿದೆ. ಭಾರತವನ್ನು ವಿಶ್ವಗುರುವನ್ನಾಗಿ ಮಾಡುವ ಸಂಕಲ್ಪ ತೊಟ್ಟಿರುವ ವಿಶ್ವನಾಯಕ ನರೇಂದ್ರ ಮೋದಿಯವರ ಕೈ ಬಲಪಡಿಸಲು ಎಲ್ಲರೂ ಮತ್ತೊಮ್ಮೆ ಬಿಜೆಪಿಗೆ ಮತ ಹಾಕಿ ಬೆಂಬಲಿಸಬೇಕು ಎಂದು ವಿಜಯ್ ಜೋಶಿ ಮನವಿ ಮಾಡಿಕೊಂಡಿದ್ದಾರೆ.

# ಬಡತನ ನಿರ್ಮೂಲನೆ ಕಾಂಗ್ರೆಸ್ ಸಿದ್ಧಾಂತ :ಎಚ್.ಸಿ.ಮಹಾದೇವಪ್ಪ

**ಉದಯರಶ್ಮಿ ನ್ಯೂಸ್**

ಸಿಂದಗಿ: ಬಡತನ ನಿರ್ಮೂಲನೆ ನುಡಿ ಕಾಂಗ್ರೆಸ್ ಪಕ್ಷದ್ದಾದರೇ ಬಡವರನ್ನೇ ನಿರ್ಮೂಲನೆ ಮಾಡುವುದು ಬಿಜೆಪಿಯ ಗುರಿಯಾಗಿದೆ ಎಂದು ಸಮಾಜ ಕಲ್ಯಾಣ ಸಚಿವ ಎಚ್.ಸಿ.ಮಹಾದೇವಪ್ಪ ಹೇಳಿದರು.



ಪಟ್ಟಣದ 2ನೆಯ ವಾರ್ಡಿನಲ್ಲಿ ಕಾಂಗ್ರೆಸ್ ಮುಖಂಡ ರಾಜು ಕೂಚಬಾಳ ಹಮ್ಮಿಕೊಂಡ ಬಹಿರಂಗ ಪ್ರಚಾರ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಉಪಚುನಾವಣೆಯ ಸಂದರ್ಭದಲ್ಲಿ ನಾನು ಈ ಕಾಲೋನಿಗೆ ನಿವಾಸಿಗಳ ಕಷ್ಟಗಳನ್ನು ನಾನು ಆಲಿಸಿ ಹೋಗಿದ್ದೆ. ನಮ್ಮ ಪಕ್ಷ 5ಗ್ಯಾರಂಟಿಗಳನ್ನು ಈಡೇರಿಸುವ ಮೂಲಕ ನುಡಿದಂತೆ ನಡೆದಿದೆ. ಪ್ರಸ್ತುತ ವಾಸವಿರುವ 8ನೂರು ಕುಟುಂಬಗಳಿಗೂ ಸುಸಜ್ಜಿತ ಮನೆ ನಿರ್ಮಿಸಿಕೊಡುವುದರಲ್ಲಿ ಶ್ರಮವಹಿಸುವೆ.

ಈ ವೇಳೆ ಶಾಸಕ ಅಶೋಕ ಮನಗೂಳಿ, ಮಾಜಿ ಶಾಸಕ ಶರಣಪ್ಪ ಸುಣಗಾರ ಮಾತನಾಡಿದರು. ಈ ವೇಳೆ ರಾಜು ಕೂಚಬಾಳ, ಕೆಪಿಸಿಸಿ ಸಂಯೋಜಕಿ ರುಕ್ಸಾನಾ ಉಸ್ತಾದ, ರಮೇಶ ಗುಬ್ಬೇವಾಡ, ಹಣಮಂತ ಸುಣಗಾರ, ರಾಜಶೇಖರ ಚೌರ, ಶರಣಪ್ಪ ಸುಲ್ಪಿ, ಶರಣಗೌಡ ಪಾಟೀಲ, ಗೋಲ್ಲಾಳ ಬಂಕಲಗಿ, ಅಂಬಿಕಾ ಪಾಟೀಲ, ಭಾರತಿ ಹೊಸಮನಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಇಂದು ಇಂದಿರಾ ಗಾಂಧಿ ಅವರ ಬಗ್ಗೆ ಟೀಕಿಸುವ ಬಿಜೆಪಿಗರು ಅಂದಿನ ಇಂದಿರಾ ಗಾಂಧಿ ಅವರು ಗರೀಬಿ ಹಠಾವೋ ಘೋಷಣೆಯನ್ನು ಇಂದು ಬಿಜೆಪಿಗರು ಗರೀಬೊಂಕೊ ಹಠಾವೋ ಮಾಡಿಕೊಂಡಿದ್ದಾರೆ."

– ಸಚಿವ ಎಚ್.ಸಿ.ಮಹದೇವಪ್ಪ

# 10 ತಿಂಗಳಲ್ಲಿ ಕರ್ನಾಟಕ ಹಾಳುಗೆಡುವಿದ ಕಾಂಗ್ರೆಸ್ :ಅಮಿತ್ ಶಾ

**ಉದಯರಶ್ಮಿ ನ್ಯೂಸ್**

ಚಿಕ್ಕೋಡಿ: ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಹಾಗೂ ಬಿಜೆಪಿಯ ವರಿಷ್ಠ ಅಮಿತ್ ಶಾ ಅವರು ಲೋಕಸಭೆ ಚುನಾವಣಾ ಪ್ರಚಾರದ ಭಾಗವಾಗಿ ಶುಕ್ರವಾರ ಕರ್ನಾಟಕದ ಚಿಕ್ಕೋಡಿಯಲ್ಲಿ ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿ, ಕೇವಲ 10 ತಿಂಗಳಲ್ಲಿ ಕರ್ನಾಟಕ ರಾಜ್ಯವನ್ನು ಕಾಂಗ್ರೆಸ್ ದನನೀಯ ಸ್ಥಿತಿಗೆ ತಂದಿದೆ ಎಂದು ಹೇಳಿದರು. ರಾಜ್ಯದಲ್ಲಿ ಅಧಿಕಾರಕ್ಕೆ ಬಂದ ಕೇವಲ 10 ತಿಂಗಳಲ್ಲಿ, ಕಾಂಗ್ರೆಸ್ ನೇತೃತ್ವದ ಸರ್ಕಾರವು ಕರ್ನಾಟಕ ರಾಜ್ಯವನ್ನು ಪ್ರಕ್ಷುಬ್ಧತೆ ಮತ್ತು ಅವ್ಯವಸ್ಥೆಯತ್ತ ಕೊಂಡೊಯ್ಯಿತು.

ಅಧಿಕಾರಕ್ಕೆ ಬಂದ ಮೇಲೆ ರೈತರಿಗೆ ನೀಡುತ್ತಿದ್ದ ರೂ. 4,000 ಧನಸಹಾಯವನ್ನು ಏಕಾಏಕಿ ಸ್ಥಗಿತಗೊಳಿಸಿರುವುದು ಕೃಷಿ ಸಮುದಾಯದ ಬಗ್ಗೆ ಕಾಂಗ್ರೆಸ್ ಪಕ್ಷಕ್ಕಿರುವ ನಿರ್ಲಕ್ಷ್ಯವನ್ನು ಪ್ರತಿಬಿಂಬಿಸುತ್ತದೆ. ಇಂತಹ ದೂರದೃಷ್ಟಿಯಿಲ್ಲದ ನೀತಿಗಳು ಸಾಮಾನ್ಯ ಜನರಿಗೆ ದ್ರೋಹ ಮಾಡುವುದಲ್ಲದೆ, ಆಡಳಿತದಲ್ಲಿ ಕಾಂಗ್ರೆಸ್ನ ಬದ್ಧತೆ ಮತ್ತು ದೂರದೃಷ್ಟಿಯ ಕೊರತೆಯನ್ನು ಎತ್ತಿ ತೋರಿಸುತ್ತದೆ.

ಇದಲ್ಲದೆ, 'ಲವ್ ಜಿಹಾದ್' ವಿಷಯದ ಸುತ್ತಲಿನ ಸವಾಲುಗಳ ಸಂಕೇತವಾದ ನೇಹಾ ಪ್ರಕರಣಕ್ಕೆ ನ್ಯಾಯ ನೀಡಲು ಸಾಧ್ಯವಾಗದಿರುವುದು ಕಾಂಗ್ರೆಸ್ನ ಅಸಮರ್ಥತೆಯನ್ನು ಬಹಿರಂಗಪಡಿಸುತ್ತದೆ. ನೇಹಾ ಅವರಂತಹ ಸಂತ್ರಸ್ತರಿಗೆ ಪಕ್ಷವು ನ್ಯಾಯವನ್ನು ನೀಡಲು ಸಾಧ್ಯವಾಗದಿದ್ದರೆ, ಅಂತಹ ಸೂಕ್ಷ್ಮ ಪ್ರಕರಣಗಳನ್ನು ಕೇಂದ್ರೀಯ ತನಿಖಾ ದಳಕ್ಕೆ ವಹಿಸುವುದು ಮಾತ್ರ ಕಾರ್ಯಸಾಧುವಾದ ಪರಿಹಾರವಾಗಿದೆ. ಇಂತಹ ನಿರ್ಣಾಯಕ ವಿಷಯಗಳನ್ನು ಪರಿಹರಿಸುವಲ್ಲಿನ ಕಾಂಗ್ರೆಸ್ನ ವೈಫಲ್ಯವು ಅದರ ವಿಶ್ವಾಸಾರ್ಹತೆ ಮತ್ತು ಸಾರ್ವಜನಿಕ ನಂಬಿಕೆ ಕುರಿತು ಪ್ರಶ್ನೆ ಹುಟ್ಟು ಹಾಕುತ್ತದೆ.

ಹಲವಾರು ಪ್ರಯತ್ನಗಳ ಹೊರತಾಗಿಯೂ, ರಾಹುಲ್ ಗಾಂಧಿಯವರ ಕರ್ನಾಟಕ ರಾಜಕೀಯ ಪ್ರವೇಶ ಅಷ್ಟು ಯಶಸ್ಸನ್ನು ಪಡೆದಿಲ್ಲ. 20ಕ್ಕೂ ಹೆಚ್ಚು ಬಾರಿ ಲಾಂಚ್ ಆಗಲು ಪ್ರಯತ್ನಿಸಿದರೂ, ಲೆಕ್ಕವಿಲ್ಲದಷ್ಟು ರ್ಯಾಲಿಗಳನ್ನು ಮಾಡಿದರು, ಕಾಂಗ್ರೆಸ್ಸಿನ ಈ ಕುಡಿ ಮತದಾರರ ಪ್ರತಿಧ್ವನಿಯನ್ನು ಅರಿಯಲು ಹೆಣಗಾಡುತ್ತಲೇ ಇದೆ. ಜನರ ನಾಡಿ ಮಿಡಿತ ಅರಿಯುವಲ್ಲಿನ ಅವರ ಅಸಮರ್ಥತೆ, ಕಾಂಗ್ರೆಸ್ ನಾಯಕತ್ವದ ಬಗ್ಗೆ ಹೆಚ್ಚುತ್ತಿರುವ ಭ್ರಮನಿರಸನವನ್ನು ಎತ್ತಿ ತೋರಿಸುತ್ತದೆ. ಇದಲ್ಲದೆ, ಹಿಂಸಾತ್ಮಕ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿರುವ ಪಕ್ಷವಾದ ಎಸ್ಡಿಪಿಐ ಜೊತೆ ಕಾಂಗ್ರೆಸ್ನ ಮೌನ ಮೈತ್ರಿಯು, ನೈತಿಕ ಸಮಗ್ರತೆ, ಕರ್ನಾಟಕದ ಶಾಂತಿ ಮತ್ತು ಸ್ಥಿರತೆಯೆಡೆಗಿನ ಪಕ್ಷದ ಬದ್ಧತೆಯ ಬಗ್ಗೆ ಗಂಭೀರ ಕಳವಳವನ್ನು ಉಂಟುಮಾಡುತ್ತದೆ. ಇಂತಹ ವಿವಾದಾತ್ಮಕ ಅಂಶಗಳೊಂದಿಗೆ ಹೊಂದಾಣಿಕೆ ಮಾಡಿಕೊಳ್ಳುವ



ಮೂಲಕ ಕಾಂಗ್ರೆಸ್ ತನ್ನದೇ ಆದ ಮೌಲ್ಯಗಳನ್ನು ರಾಜಿ ಮಾಡಿಕೊಳ್ಳುವುದರ ಜೊತೆಗೆ ರಾಜ್ಯದ ಭದ್ರತೆ ಮತ್ತು ಕೋಮು ಸೌಹಾರ್ದತೆಗೆ ಧಕ್ಕೆ ತಂದಿದೆ.

ಇದಕ್ಕೆ ತದ್ವಿರುದ್ಧವಾಗಿ, ಬಿಜೆಪಿಯು ಕರ್ನಾಟಕದ ಭರವಸೆಯ ಕಿರಣವಾಗಿ ಹೊರಹೊಮ್ಮುತ್ತಿದೆ, ಅಂತರ್ಗತ ಅಭಿವೃದ್ಧಿ, ಉತ್ತಮ ಆಡಳಿತ ಮತ್ತು ಎಲ್ಲಾ ನಾಗರಿಕರ ಕಲ್ಯಾಣಕ್ಕಾಗಿ ಅಚಲವಾದ ಬದ್ಧತೆಯ ದೃಷ್ಟಿಕೋನವನ್ನು ಹೊಂದಿದೆ. ತನ್ನ ಭರವಸೆಗಳನ್ನು ಈಡೇರಿಸುವ ಮತ್ತು ಪ್ರಗತಿಯ ವಾತಾವರಣವನ್ನು ಪೋಷಿಸುವ ದಾಖಲೆಯೊಂದಿಗೆ, ತೆವಳುತ್ತಾ ಸಾಗುತ್ತಿರುವ ಕಾಂಗ್ರೆಸ್ ನೇತೃತ್ವದ ಆಡಳಿತಕ್ಕೆ ಬಿಜೆಪಿ ವಿಶ್ವಾಸಾರ್ಹ ಪರ್ಯಾಯ ಆಯ್ಕೆಯಾಗಿದೆ.

ಕರ್ನಾಟಕವು ಮತ್ತೊಂದು ನಿರ್ಣಾಯಕ ಚುನಾವಣಾ ಘಟ್ಟವನ್ನು ಸಮೀಪಿಸುತ್ತಿರುವಾಗ, ಜನರ ಮುಂದಿರುವ ಆಯ್ಕೆಯು ಸ್ಪಷ್ಟವಾಗಿದೆ: ಪ್ರಧಾನಿ ನರೇಂದ್ರ ಮೋದಿ ಮತ್ತು ಗೃಹ ಸಚಿವ ಅಮಿತ್ ಶಾ ಅವರ ಸದೃಢ ನಾಯಕತ್ವಕ್ಕೆ ಮತ ಹಾಕಿ, ಸಮೃದ್ಧಿ ಮತ್ತು ಸ್ಥಿರತೆಯ ಹಾದಿಯನ್ನು ಆಯ್ಕೆ ಮಾಡಿಕೊಳ್ಳುವುದು ಅಥವಾ ಕಾಂಗ್ರೆಸ್ಸನ್ನು ಆರಿಸಿ, ಅನಿಶ್ಚಿತತೆ ಮತ್ತು ಹಿಂಜರಿತದ ಹಾದಿಯಲ್ಲಿ ಮುಂದುವರಿಯುವುದು. ಕಾಂಗ್ರೆಸ್ನ ವೈಫಲ್ಯಗಳು ಮತ್ತು ನ್ಯೂನತೆಗಳಿಗೆ ವೈರುಧ್ಯವಾಗಿ, ಕರ್ನಾಟಕದ ಉಜ್ವಲ ಭವಿಷ್ಯವನ್ನು ಬಲವಾಗಿ ಪ್ರತಿಧ್ವನಿಸುತ್ತಿರುವ ಬಿಜೆಪಿಯು, ರಾಜ್ಯದಲ್ಲಿ ಭರವಸೆ ಮತ್ತು ಪ್ರಗತಿಯ ಹೊಸ ಯುಗಕ್ಕೆ ನಾಂದಿ ಹಾಡಲಿದೆ.

ಪ್ರಧಾನಿ ಮೋದಿಯವರ ಸರ್ಕಾರವು ಯಾವುದೇ ಪ್ರತಿಕೂಲ ಪರಿಣಾಮಗಳಿಲ್ಲದೆ, ಕಾಂಗ್ರೆಸ್ನ ಭಯ ಹುಟ್ಟಿಸುವ ತಂತ್ರಗಳನ್ನು ತಳ್ಳಿ ಹಾಕಿ,370ನೇ ವಿಧಿಯನ್ನು ಯಶಸ್ವಿಯಾಗಿ ತೆಗೆದು ಹಾಕಿತು. ಇದು ಪ್ರಧಾನಿ ಮೋದಿ ಮತ್ತು ಗೃಹ ಸಚಿವ ಶಾ ಅವರ ದೂರದೃಷ್ಟಿಯ ನಾಯಕತ್ವದಲ್ಲಿ ದೇಶವು ಪ್ರಗತಿಯೆಡೆಗೆ ಸಾಗುತ್ತಿರುವುದರ ನಿದರ್ಶನವಾಗಿದೆ.

ಕರ್ನಾಟಕವು ಮತ್ತೊಂದು ಚುನಾವಣಾ ಹಣಾಹಣಿಗೆ ಸಜ್ಜಾಗುತ್ತಿರುವಾಗ, ಭಾರತೀಯ ಜನತಾ ಪಕ್ಷ ಮತ್ತು ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ನ ವ್ಯತಿರಿಕ್ತ ನೀತಿ ನಿರೂಪಣೆಗಳ ಮೇಲೆ ಮತ್ತೊಮ್ಮೆ ಗಮನ ಹರಿಸುವುದು ಅವಶ್ಯಕವಾಗಿದೆ. ಕಾಂಗ್ರೆಸ್ ನೇತೃತ್ವದ ಆಡಳಿತ ತಪ್ಪು ಹೆಜ್ಜೆಗಳು ಮತ್ತು ವಿವಾದಗಳ ಸರಣಿಯೊಂದಿಗೆ, ರಾಜ್ಯವನ್ನು ಹಾಳುಗೆಡುವುತ್ತಿರುವಾಗ, ಬಿಜೆಪಿಯು ಸ್ಥಿರತೆ, ಪ್ರಗತಿ ಮತ್ತು ಪರಿಣಾಮಕಾರಿ ಆಡಳಿತದ ಭರವಸೆಯ ಮೂಲಕ ದಾರಿದೀಪವಾಗಿ ಹೊರಹೊಮ್ಮುತ್ತಿದೆ.

# ಅಭಿವೃದ್ಧಿ ನಮ್ಮ ಮೂಲಮಂತ್ರ :ಎಂ.ಬಿ.ಪಾಟೀಲ

**ಉದಯರಶ್ಮಿ ನ್ಯೂಸ್**

ವಿಜಯಪುರ: ಸಂಸದ ರಮೇಶ ಜಿಗಜಿಣಗಿ ಅವರಿಗೆ ಅಭಿವೃದ್ಧಿ ಎಂದರೆ ಅಸಡ್ಡೆಯಿದೆ ಎಂದು ಕೈಗಾರಿಕೆ ಮೂಲಸೌಲಭ್ಯ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಹೇಳಿದ್ದಾರೆ.

ಬಬಲೇಶ್ವರ ತಾಲೂಕಿನ ದೇವರ ಗೆಣ್ಣೂರ ಮತ್ತು ಗುಣದಾಳದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಪ್ರೊ. ರಾಜು ಆಲಗೂರ ಪರ ಮತಯಾಚಿಸಿ ಅವರು ಮಾತನಾಡಿದರು.



ಅಭಿವೃದ್ಧಿ ನಮ್ಮ ಮೂಲಮಂತ್ರ. ಅದು ನಿತ್ಯ ನಿರಂತರವಾಗಿದೆ. ಕೋಮು ಭಾವನೆ ಕೆರಳಿಸುವವರಿಗೆ ತಕ್ಕ ಪಾಠ ಕಲಿಸಲು ಸರ್ವ ಜನಾಂಗದ ಶಾಂತಿಯ ತೋಟದ ಪಣತೊಟ್ಟಿರುವ ಕಾಂಗ್ರೆಸ್ಸನ್ನು ಬೆಂಬಲಿಸಿ ಸರ್ವಾಂಗೀಣ ಅಭಿವೃದ್ಧಿಗೆ ಕೈ ಜೋಡಿಸಬೇಕು ಎಂದು ಅವರು ಹೇಳಿದರು.

ಸಂಸದ ರಮೇಶ ಜಿಗಜಿಣಗಿ ಅವರಿಗೆ ಅಭಿವೃದ್ಧಿ ಎಂದರೆ ಅಸಡ್ಡೆ ಎಂಬಂತಾಗಿದೆ. ಶಾಸಕ ಸಂಸದರಾದವರು ತಮ್ಮ ಅಧಿಕಾರವಧಿಯಲ್ಲಿ ಕನಿಷ್ಠ ಶೇ. 80 ರಷ್ಟಾದರೂ ಕೆಲಸ ಮಾಡಬೇಕು. ಆದರೆ, ಶೂನ್ಯ ಅಭಿವೃದ್ಧಿ ಮಾಡಿರುವವರಿಗೆ ತಕ್ಕ ಪಾಠ ಕಲಿಸಬೇಕು. ಕಾಂಗ್ರೆಸ್ ಅಭ್ಯರ್ಥಿ ಪ್ರೊ. ರಾಜು ಆಲಗೂರ ಕ್ರೀಯಾಶೀಲರಾಗಿದ್ದು, ಬಹುಭಾಷೆ ಬಲ್ಲವರಾಗಿದ್ದಾರೆ. ಇಂಥ ವಿದ್ಯಾವಂತ ಅಭ್ಯರ್ಥಿಯನ್ನು ಆಯ್ಕೆ ಮಾಡಿ ವಿಜಯಪುರ ಜಿಲ್ಲೆಯಲ್ಲಿ ಬಹುದಿನಗಳಿಂದ ನನೆಗುದಿಗೆ ಬಿದ್ದಿರುವ ಜ್ವಲಂತ ಸಮಸ್ಯೆಗಳ ಪರಿಹಾರಕ್ಕೆ ಅವಕಾಶ ಮಾಡಿ ಕೊಡಬೇಕು ಎಂದು ಅವರು ಹೇಳಿದರು.

ನರೇಂದ್ರ ಮೋದಿ ಅವರಿಗೆ 10 ವರ್ಷ ಅವಕಾಶ ನೀಡಿದ್ದು ಜನರಿಗ ಸಾಕು ಎನಿಸಿದೆ. ಹೀಗಾಗಿ ಅವರಿಗೆ ಈಗ ಕಾಂಗ್ರೆಸ್ ಗ್ಯಾರಂಟಿಗಳ ಮೇಲೆ ಭರವಸೆ ಮೂಡಿದೆ. ಮತದಾರರು ಈ ಚುನಾವಣೆಯಲ್ಲಿ ಕಾಂಗ್ರೆಸ್ ಗೆಲ್ಲಿಸಿ ಬಿಜೆಪಿಗೆ ತಕ್ಕಪಾಠ ಕಲಿಸಲು ಸನ್ನದ್ಧರಾಗಿದ್ದಾರೆ ಎಂದು ಅವರು ಹೇಳಿದರು.

ಈ ವೇಳೆ ಕಾಂಗ್ರೆಸ್ ಮುಖಂಡರಾದ ವಿ. ವಿ. ಅರಕೇರಿ, ಡಾ. ಶಂಕ್ರಯ್ಯ ಹಿರೇಮಠ ಮಾತನಾಡಿದರು.

ಈ ಸಂದರ್ಭದಲ್ಲಿ ವಿ. ಎಚ್. ಬಿದರಿ, ಅಕ್ಬರ ಬಿದರಿ, ಅರುಣ ಶಿರಬೂರ, ಬಾಬು ಗಡದಾನ, ಆಶಾ ಕಟ್ಟಿಮನಿ, ಶಂಕರಗೌಡ ಪಾಟೀಲ, ಟಿ. ಆರ್. ಪಚ್ಚೆಣ್ಣವರ, ಸುರೇಶಗೌಡ ಪಾಟೀಲ, ಪ್ರಕಾಶ ಸೊನ್ನದ, ಮೈಬೂಬಸಾಬ ರಾಂಪುರ, ಶಿವಪ್ಪ ಮಗಾರಿ, ಸುರೇಶ ಕುರಿ, ಗೋಪಾಲ ಬಾವಿಮನಿ ಮುಂತಾದವರು ಉಪಸ್ಥಿತರಿದ್ದರು.

# ಮತದಾನ ಜಾಗೃತಿ ಅಭಿಯಾನ: ರಂಗೋಲಿ ಸ್ಪರ್ಧೆ

**ಉದಯರಶ್ಮಿ ನ್ಯೂಸ್**

ದೇವರಹಿಪ್ಪರಗಿ: ಮತದಾನ ಜಾಗೃತಿ ಅಭಿಯಾನದ ಅಂಗವಾಗಿ ಜರುಗಿದ ರಂಗೋಲಿ ಸ್ಪರ್ಧೆಯಲ್ಲಿ ವಿವಿಧ ಗ್ರಾಮಗಳ ಸ್ವಸಹಾಯ ಸಂಘದ ಮಹಿಳೆಯರಿಂದ ವಿವಿಧ ರಂಗೋಲಿಗಳು ಕಂಗೊಳಿಸಿದವು.

ಪಟ್ಟಣದ ಬಸ್ ನಿಲ್ದಾಣದ ಆವರಣದಲ್ಲಿ ಶನಿವಾರ ಲೋಕಸಭಾ ಸಾರ್ವತ್ರಿಕ ಚುನಾವಣೆಯ ಅಂಗವಾಗಿ ತಾಲ್ಲೂಕು ಸ್ವೀಪ್ ಸಮಿತಿ ಹಾಗೂ ಪಟ್ಟಣ ಪಂಚಾಯಿತಿ ಅಡಿಯಲ್ಲಿ ಮತದಾನ ಜಾಗೃತಿ ಅಭಿಯಾನದ ರಂಗೋಲಿ ಸ್ಪರ್ಧೆ ಏರ್ಪಡಿಸಲಾಗಿತ್ತು. ರಂಗೋಲಿ ಸ್ಪರ್ಧೆಯಲ್ಲಿ ತಾಲ್ಲೂಕಿನ ವಿವಿಧ ಗ್ರಾಮಗಳಿಂದ ಆಗಮಿಸಿದ ಸ್ವಸಹಾಯ ಸಂಘದ ಮಹಿಳೆಯರು ಮತದಾನ ಜಾಗೃತಿ ರಂಗೋಲಿ ಬಿಡಿಸಿದರು.



ಚುನಾವಣಾ ಪರ್ವ ದೇಶದ ಗರ್ವ, ಮೇ 7 ರಂದು ತಪ್ಪದೆ ಮತದಾನ ಮಾಡಿ, ನಾನು ತಪ್ಪದೇ ಮತದಾನ ಮಾಡುತ್ತೇನೆ, ಭಾರತ ನಕ್ಷೆ ಹೀಗೆ ಹಲವು ಬಗೆಯ ರಂಗೋಲಿಗಳು ಆಕರ್ಷಣೀಯವಾಗಿ ಪ್ರಯಾಣಿಕರ ಗಮನ ಸೆಳೆದವು.

ಸಹಾಯಕ ಚುನಾವಣಾಧಿಕಾರಿ ಪ್ರವೀಣ ಜೈನ್ ರಂಗೋಲಿ ವೀಕ್ಷಿಸಿ ಸಂತಸ ವ್ಯಕ್ತಪಡಿಸಿದರು. ನಂತರ ರಂಗೋಲಿ ಸ್ಪರ್ಧೆಯಲ್ಲಿ ಪ್ರಥಮ, ದ್ವಿತೀಯ, ತೃತಿಯ ವಿಜೇತರಿಗೆ ತಾಲ್ಲೂಕು ಪಂಚಾಯಿತಿ ಇಓ ಸಂಜೀವ ಜಿನ್ನೂರ ನಗದು ಬಹುಮಾನ ಹಾಗೂ ಪ್ರಮಾಣಪತ್ರ ವಿತರಿಸಿ ಮಾತನಾಡಿದರು.

ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಎಲ್.ಡಿ.ಮುಲ್ಲಾ, ಕಿರಿಯ ಆರೋಗ್ಯ ನಿರೀಕ್ಷಕ ಫಿರೋಜ್ ಮುಲ್ಲಾ, ತಾಲ್ಲೂಕು ಪಂಚಾಯಿತಿ ಸಹಾಯಕ ನಿರ್ದೇಶಕರಾದ ಶಿವಾನಂದ ಮೂಲಿಮನಿ( ಪಂಚಾಯತ್ ರಾಜ್) ಶಾಂತಗೌಡ ನ್ಯಾಮಣ್ಣವರ(ನರೇಗಾ), ಮುತ್ತುರಾಜ ಹಿರೇಮಠ, ಸೋಮು ಭೋವಿ, ಜಿ.ಎಸ್.ರೋಡಗಿ, ಸಿದ್ದು ಕಾಂಬ್ಳೆ, ಆನಂದ ಮುದೋಡಗಿ, ಮಹೇಶ ಬಗಲಿ, ಬಸವರಾಜ್ ಆರ್. ಶ್ರೀಶೈಲ ಕಬ್ಬಿಣ, ಭೀಮರಾಯ ಭಾವಿಕಟ್ಟಿ, ಆದಣ್ಣ ಹೊಸಮನಿ ಸೇರಿದಂತೆ ಮಹಿಳೆಯರು, ಸಿಬ್ಬಂದಿ ಇದ್ದರು.

# ಜಿಲ್ಲಾ ಅಹಿಂದ ಸಂಘಟನೆಯಿಂದ ಆಲಗೂರಗೆ ಬೆಂಬಲ

**ಉದಯರಶ್ಮಿ ನ್ಯೂಸ್**

ವಿಜಯಪುರ: ರಾಜ್ಯದಲ್ಲಿ ಅಹಿಂದ ವರ್ಗದ ಮುಖ್ಯಮಂತ್ರಿ ಸಿದ್ಧರಾಮಯ್ಯನವರ ಕೈ ಬಲಪಡಿಸಲು ಜಿಲ್ಲೆಯ ಅಹಿಂತ ವರ್ಗದ ಜನತೆ ಈ ಸಾರಿ ಜಿಲ್ಲಾ ಅದ್ಯಕ್ಷರು, ತಾಲೂಕಾ ಅಧ್ಯಕ್ಷರು ಹಾಗೂ ಅಹಿಂದ ವರ್ಗದ ಎಲ್ಲ ಸಂಘಟನೆಗಳು ಕಾರ್ಯನಿರತರಾಗಿದ್ದಾರೆ. ಅಹಿಂದ ಬಹುಸಂಖ್ಯಾತರ ವರ್ಗದವರಾದ ರಾಜು ಆಲಗೂರ್ ರವರನ್ನು ಬೆಂಬಲಿಸುವುದಾಗಿ ತೀರ್ಮಾನಿಸಲಾಗಿದೆ.

ಕಳೆದ 70 ವರ್ಷಗಳಿಂದ ಅಹಿಂದ ವರ್ಗವು ತುಳಿತಕ್ಕೆ ಒಳಪಡುತ್ತಿದ್ದು, ಈ ಬಾರಿ ಕೇಂದ್ರದಲ್ಲಿ ಕಾಂಗ್ರೆಸ್ ಸರಕಾರ ಅಧಿಕಾರಕ್ಕೆ ಬರುವಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಅಹಿಂದ ವರ್ಗ ಬೆಂಬಲಿಸಬೇಕೆಂದು ಅಹಿಂದ ರಾಜ್ಯ ಅದ್ಯಕ್ಷರಾದ ಪ್ರಭುಲಿಂಗ ದೊಡನಿ ರವರು ಸಾಕಷ್ಟು ಹೋರಾಟ ಮಾಡುತ್ತಿದ್ದಾರೆ. ಅಹಿಂದ ವರ್ಗದ ಜನತೆಯನ್ನು ಸಂಘಟಿಸುತ್ತಿದ್ದಾರೆ. ಅಹಿಂದ ರಾಜ್ಯ ಸಂಘಟನಾ ಕಾರ್ಯದರ್ಶಿಗಳಾದ ಯಾಕೂಬ ಜತ್ತಿ ಎಮ್.ಸಿ. ಮುಲ್ಲಾ, ವಿಠ್ಠಲಗೌಡ ಬಿರಾದಾರ (ಗುಗ್ಗದಡ್ಡಿ), ಫಯಾಜ ಕಲಾದಗಿ, ಶ್ರೀಶೈಲ ಕೌಲಗಿ, ಪ್ರಕಾಶ ಗುಡಿಮನಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರಜ್ವಲ್ ರೇವಣ್ಣ..




**ಉದಯರಶ್ಮಿ ದಿನಪತ್ರಿಕೆ**



ಒಂದು ವೇಳೆ ನಾನು ಪ್ರಜ್ವಲ್ ರೇವಣ್ಣ ಮಾಡಿದಂತ ಅಪರಾಧವನ್ನು ಮಾಡಿದಿದ್ದರೆ ಏನಾಗುತ್ತಿತ್ತು..

ಈ ರೀತಿ ಆಗಿದೆ ಎಂಬ ಸುಳಿವಿನ ಪೆನ್ ಡ್ರೈವ್ ಸಿಗುತ್ತಿದ್ದಂತೆ ಪೊಲೀಸರು ಮನೆಗೆ ಬರುತ್ತಿದ್ದರು. ತೊಟ್ಟ ಬಟ್ಟೆಯಲ್ಲೇ ನನ್ನನ್ನು ಎಳೆದುಕೊಂಡು, ಕೆಟ್ಟ ಮಾತುಗಳಲ್ಲಿ ನಿಂದಿಸುತ್ತಾ, ಬೀದಿಯಲ್ಲಿ ಮೆರವಣಿಗೆ ಮಾಡುತ್ತಾ, ಲಾಟಿಯಲ್ಲಿ ಬಾರಿಸುತ್ತಾ, ನಾಲ್ಕಾರು ಹೆಣ್ಣು ಮಕ್ಕಳ ಕೈಯಲ್ಲಿ ಚಪ್ಪಲಿ, ಪೊರಕೆಯಲ್ಲಿ ಹೊಡೆಸುತ್ತಾ, ಥೂ – ಛೀ ಎಂದು ಉಗಿಸುತ್ತಾ ಸ್ಟೇಷನ್ ಗೆ ಕರೆದುಕೊಂಡು ಹೋಗುತ್ತಿದ್ದರು..

ಅನಂತರದಲ್ಲಿ, ಇಷ್ಟೆಲ್ಲಾ ದೊಡ್ಡ ಸಂಖ್ಯೆಯ ಮಹಿಳೆಯರಿಗೆ ಲೈಂಗಿಕ ಕಿರುಕುಳ ಮತ್ತು ಅತ್ಯಾಚಾರ ಮಾಡಿದ್ದು ಬಯಲಾಗುತ್ತಿದ್ದಂತೆ ಬಹುತೇಕ ಎನ್ಕೌಂಟರ್ ಮಾಡುವ ಸಾಧ್ಯತೆ ಇತ್ತು. ಮಾಧ್ಯಮಗಳು ನನ್ನನ್ನು ಅತ್ಯಂತ ನೀಚನಂತೆ, ದುಷ್ಟ ಕ್ರಿಮಿಯಂತೆ, ಇಷ್ಟು ಕೆಳಮಟ್ಟದ ಮನುಷ್ಯ ಇಲ್ಲವೇನೋ ಎಂಬಂತೆ ಚಿತ್ರಿಸುತ್ತಿದ್ದರು. ರಾಜಕಾರಣಿಗಳು ಇದರಲ್ಲಿ ಯಾವುದೇ ರಾಜಕೀಯವಿದೆ ಎಂದು ಯಾರನ್ನೂ ದೂರುತ್ತಿರಲಿಲ್ಲ, ಪೆನ್ ಡ್ರೈವ್ ರೆಕಾರ್ಡ್ ಮಾಡಿದ್ದು ಯಾರು ? ಅದನ್ನು ಹಂಚಿದ್ದು ಯಾರು ? ಅದರಿಂದ ಯಾವ ಪಕ್ಷಕ್ಕೆ ಲಾಭವಾಗುತ್ತದೆ ? ಯಾರಿಗೆ ಹಾನಿಯಾಗುತ್ತದೆ ? ಎಂಬುದನ್ನು ಯಾರೂ ಚರ್ಚಿಸಲು ಹೋಗುತ್ತಿರಲಿಲ್ಲ..

ಇನ್ನು ನಮ್ಮ ಇಡೀ ಕುಟುಂಬವನ್ನು ಅತ್ಯಂತ ಹೀನಾಯ ಸ್ಥಿತಿಗೆ ತೆಗೆದುಕೊಂಡು ಹೋಗಿ, ಎಲ್ಲರೂ ಊರಿನಿಂದ ಪರಾರಿ ಆಗಬೇಕು ಅಥವಾ ಆತ್ಮಹತ್ಯೆ ಮಾಡಿಕೊಳ್ಳಬೇಕು, ಹಾಗೆ ಮಾಡುತ್ತಿದ್ದರು. ಸಾಮಾನ್ಯ ಜನ ಸಹ ನನ್ನನ್ನು ಇಡೀ ವಿಶ್ವ ಕಂಡ ನಟೋರಿಯಸ್ ಕೀಚಕನಂತೆ, ಕಿರಾತಕನಂತೆ ಮಾತನಾಡಿಕೊಳ್ಳುತ್ತಿದ್ದರು. ನನಗೆ ದಿಢೀರ್ ಸಾವು ಬೇಡ, ಕಲ್ಲಿನಿಂದ ಹೊಡೆದು ಜೀವನಪರ್ಯಂತ ನರಳುತ್ತಾ, ನರಳುತ್ತಾ ಸಾಯುವಂತೆ ಮಾಡಬೇಕು ಎಂದು ಹೇಳಿಕೊಳ್ಳುತ್ತಿದ್ದರು. ಕೆಲವು ಸಂಘಟನೆಗಳವರು ನಮ್ಮ ಮನೆಗೆ ಬಂದು ಕಲ್ಲು ಹೊಡೆದು ಇಡೀ ಮನೆಯನ್ನು ಚೆಲ್ಲಾಪಿಲ್ಲಿ ಮಾಡಿ ಸುಟ್ಟಾಕುತ್ತಿದ್ದರು..

ಏಕೆಂದರೆ, ನಾನೊಬ್ಬ ಸಾಮಾನ್ಯ ಮನುಷ್ಯ. ನಾನು



ಅಷ್ಟೊಂದು ಹೆಣ್ಣುಮಕ್ಕಳ ಜೊತೆ ಸುಖ ಅನುಭವಿಸಿದ್ದನ್ನು ಇವರು ಸಹಿಸುತ್ತಿರಲಿಲ್ಲ ಅಥವಾ ಆ ಗೌರವಾನ್ವಿತ ಹೆಣ್ಣು ಮಕ್ಕಳನ್ನು ಸಾಮಾನ್ಯನೊಬ್ಬ ಅನುಭವಿಸುವುದನ್ನು ಅವರು ಊಹಿಸಿಕೊಳ್ಳಲು ಸಾಧ್ಯವಿಲ್ಲ. ಅಷ್ಟು ಹೊಟ್ಟೆ ಉರಿ. ಅದಕ್ಕಾಗಿಯೇ ಎಷ್ಟೋ ಬಾರಿ ಅನಿಸುತ್ತದೆ, ಭಾರತದಲ್ಲಿ ಹುಟ್ಟಿದರೆ ಶ್ರೀಮಂತ, ಪ್ರಭಾವಶಾಲಿ, ರಾಜಕೀಯ ಮನೆತನದಲ್ಲಿಯೇ ಹುಟ್ಟಬೇಕು, ಇಲ್ಲದಿದ್ದರೆ ಕನಿಷ್ಠ ಒಳ್ಳೆಯ ತಳಿ ನಾಯಿಯಾಗಿಯಾದರೂ ಹುಟ್ಟಬೇಕು ಎನಿಸುತ್ತದೆ..

ಶ್ರೀಮಂತರಾದರೆ ನಾವು ವಿದೇಶಕ್ಕೆ ತಪ್ಪಿಸಿಕೊಂಡು ಹೋಗುವ ಸಾಧ್ಯತೆ ಆದರೂ ಇರುತ್ತದೆ. ಒಳ್ಳೆಯ ವಕೀಲರನ್ನು ನೇಮಿಸುವ ಸಾಮರ್ಥ್ಯವೂ ಇರುತ್ತದೆ. ಜೊತೆಗೆ ಆ ಹೆಣ್ಣು ಮಕ್ಕಳೇ ಸರಿ ಇಲ್ಲ, ಅವರ ನಡತೆಯೂ ಸರಿ ಇಲ್ಲ ಎಂದು ಆರೋಪಿಸುವ ಸ್ವಾತಂತ್ರ್ಯವೂ ಇರುತ್ತದೆ, ಮಾಧ್ಯಮಗಳು ಸಹ ಪೆನ್ ಡ್ರೈವ್ ಅನ್ನು ಹಂಚಿದವನು ಯಾರು, ಅದರ ರಾಜಕೀಯ ಲಾಭ, ಷಡ್ಯಂತ್ರಗಳ ಬಗ್ಗೆ ಮಾತನಾಡುತ್ತಾ, ಅಪರಾಧಿಗೆ ಪರೋಕ್ಷವಾಗಿ ಸಹಾಯವನ್ನು ಮಾಡುತ್ತಾರೆ. ಮುಂದೆ ಸಾಕ್ಷಿಗಳನ್ನು ಹೆದರಿಸುವ, ಆಮಿಷ ಒಡ್ಡುವ ಸಾಧ್ಯತೆಯೂ ಶ್ರೀಮಂತರಿಗೆ ಇರುತ್ತದೆ. ಬಡವನಾದರೆ ಕೇವಲ ಒಂದು ಅತ್ಯಾಚಾರಕ್ಕೆ ಎನ್ಕೌಂಟರ್ ಗೆ ಬಲಿಯಾಗಬೇಕಾಗುತ್ತದೆ..

ಹಾಗೆಂದು ಇಲ್ಲಿ ನಾನು ಅತ್ಯಾಚಾರವನ್ನು ಬೆಂಬಲಿಸುತ್ತಿಲ್ಲ. ಅತ್ಯಾಚಾರಿಗಳಿಗೆ ಜೀವಾವಧಿ ಶಿಕ್ಷೆಯಾಗಲಿ. ಆದರೆ ನ್ಯಾಯದ ಅಸಮಾನತೆಯನ್ನು ಮುಖ್ಯ ಅಂಶವಾಗಿ ಇಟ್ಟುಕೊಂಡು ಪ್ರಸ್ತಾಪಿಸುತ್ತಿದ್ದೇನೆ. ಪ್ರಜಾಪ್ರಭುತ್ವ ದೇಶದಲ್ಲಿ ಎಲ್ಲರಿಗೂ ಒಂದೇ ರೀತಿಯ ನ್ಯಾಯ. ಅದರಲ್ಲೂ



ಕ್ರಿಮಿನಲ್ ಅಪರಾಧಗಳಿಗೆ ಒಂದೇ ಕ್ರಿಮಿನಲ್ ಕೋಡ್ ಇದೆ. ಆದರೂ ಬಹುದೊಡ್ಡ ಅತ್ಯಾಚಾರ, ಕೊಲೆ ಬೆದರಿಕೆ, ಕಿಡ್ನಾಪ್ ಮುಂತಾದ ಘಟನೆಗಳಲ್ಲಿ ಭಾಗಿಯಾದ ನಂತರವೂ ಗೌರವಾನ್ವಿತವಾಗಿ ನೋಟಿಸ್ ನೀಡಿ, ಅವರಂತೆ ನನ್ನನ್ನು ಸ್ವಾಗತಿಸಿ, ವಿಚಾರಣೆ ಮಾಡುವ ವ್ಯಕ್ತಿಯಾಗಿ ನಾನು ಉಳಿದಿಲ್ಲವಲ್ಲ ಎಂಬ ಕೊರಗು ಕಾಡುತ್ತಿದೆ..

ಕೇವಲ ಹೆಲ್ಮೆಟ್ ಹಾಕದಿದ್ದಕ್ಕೆ ಅಥವಾ ಇತರ ಯಾವುದೋ ಸಣ್ಣ ಆಕಸ್ಮಿಕ ಅಪಘಾತದಲ್ಲಿ ಭಾಗಿಯಾಗಿದ್ದಕ್ಕೆ ಪೊಲೀಸರು ಇನ್ನು ಈ ಜೀವನ ಸಾಕು ಎಂಬಂತೆ ನನ್ನೊಂದಿಗೆ ವರ್ತಿಸುತ್ತಾರೆ. ಆದರೆ ಪ್ರಭಾವಶಾಲಿಗಳ ಒಂದೊಂದೇ ಹಗರಣಗಳು ಹೊರಗೆ ಬರುತ್ತಿರುವಾಗಲು ಇನ್ನೂ ಅಪರಾಧಗಳ ಬಗ್ಗೆ ಚರ್ಚೆಗಳು, ತನಿಖೆಗಳು ನಡೆಯುತ್ತಲೇ ಇದೆ, ಬಂಧನವಾಗಿಲ್ಲ. ಆದರೆ ನನ್ನಂಥ ಸಾಮಾನ್ಯನ ವಿಷಯದಲ್ಲಿ ಚರ್ಚೆಗಳಿಗೆ ಅವಕಾಶವೇ ಇರುವುದಿಲ್ಲ..

ಬಸವಣ್ಣನವರ ಸಮ ಸಮಾಜದ ಆಶಯ, ಮಹಾತ್ಮ ಗಾಂಧಿಯವರ ನೈತಿಕ ಮೌಲ್ಯಗಳ ಜೀವನ ವಿಧಾನ, ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಸಮಾನ ಹಕ್ಕು ಮತ್ತು ಕರ್ತವ್ಯಗಳು ಇಂದು ನೆನಪಾಗುತ್ತಿದೆ..

ಒಂದು ಸಣ್ಣ ಅನಿವಾರ್ಯ ತಪ್ಪು ಮಾಡಲು ಮನಸ್ಸು ನೂರಾರು ಬಾರಿ ಯೋಚಿಸುತ್ತದೆ, ಭಯವಾಗುತ್ತದೆ, ಊಟ ಸೇರುವುದಿಲ್ಲ, ನಿದ್ದೆ ಬರುವುದಿಲ್ಲ, ಯಾರಾದರೂ ನೋಡಿಬಿಟ್ಟರೆ ಎಂಬ ಭಯ ಕಾಡುತ್ತಿರುತ್ತದೆ. ಪೊಲೀಸರಿಗೆ ಸಿಕ್ಕಿಬಿದ್ದರೆ, ನಾನು ಬದುಕುವುದಾದರೂ ಹೇಗೆ ಎಂದು ಸಣ್ಣ ಅನಿವಾರ್ಯ ತಪ್ಪಿಗಾಗಿ ಸಾಕಷ್ಟು ಸಲ ಯೋಚನೆ ಮಾಡುತ್ತಿರುತ್ತೇನೆ. ಏಕೆಂದರೆ ತಪ್ಪು ಸರಿಗಳ ಬಗ್ಗೆ ತಿಳುವಳಿಕೆ ಇದೆ. ಅದರಲ್ಲಿ ತಪ್ಪು ಮಾಡುವಾಗ ಆಗುವ ಮಾನಸಿಕ ಕ್ಷೋಭೆ ಸಹಿಸಲಸಾಧ್ಯವಾಗಿರುತ್ತದೆ. ಆದರೆ ಒಂದು ಉನ್ನತ ಸ್ಥಾನಕ್ಕೇರಿಯು, 30 ವರ್ಷಗಳ ವಯಸ್ಸಾದ ನಂತರವೂ, ಸಾರ್ವಜನಿಕ ಜೀವನದಲ್ಲಿ ನಿರಂತರವಾಗಿ, ಅತ್ಯಂತ ಭಯಂಕರ, ಅಮಾನವೀಯ ತಪ್ಪುಗಳನ್ನು ಮಾಡುವ ಮನಸ್ಥಿತಿ ನನ್ನಂಥವರಿಗೆ ಹೇಗೆ ಬರಲು ಸಾಧ್ಯ. ಈ ಸಮಾಜ ನನ್ನಂಥವನನ್ನು ಸಹಿಸಿಕೊಳ್ಳುವುದಾದರೂ ಹೇಗೆ..

ಆದರೆ ಶ್ರೀಮಂತರ ಈ ವಿಕೃತಗಳನ್ನು ಸಮಾಜ ಸಹಿಸಿಕೊಳ್ಳುತ್ತದೆ ಅಥವಾ ನೇರವಾಗಿ ಅಲ್ಲದಿದ್ದರೂ ಪರೋಕ್ಷವಾಗಿ ಅವರ ಪರವಾಗಿ ಮಾತನಾಡುವವರು ಸಾಕಷ್ಟು ಜನರಿದ್ದಾರೆ. ಅದು ಸಹಜ ಎಂಬಂತೆ ಸ್ವೀಕರಿಸುತ್ತಾರೆ. ಅನೇಕ ಸಂದರ್ಭಗಳು ಅವರಿಗೆ ಅನುಕೂಲಕರವಾಗಿಯೇ ಇರುತ್ತದೆ. ಬಹುಶಃ ಪ್ರಜ್ವಲ್ ರೇವಣ್ಣನಿಗೆ ಶಿಕ್ಷೆಯಾಗುವ ಸಾಧ್ಯತೆಯೂ ಕಡಿಮೆ. ಈಗ ತಾತ್ಕಾಲಿಕವಾಗಿ ಬಂಧನವಾಗಬಹುದು. ಕೆಲವು ದಿನ ಜೈಲಿಗೆ ಹೋಗಬಹುದು. ಆದರೆ ಮುಂದೆ ಸಾಕ್ಷಿಗಳ ಕೊರತೆ, ಸಾಕ್ಷ್ಯಗಳ ತಿರುಗು ಬಾಣ ಮುಂತಾದ ಕಾರಣಗಳಿಂದ, ಅತ್ಯುತ್ತಮ ವಕೀಲರ ನೆರವಿನಿಂದ ನಿರಪರಾಧಿಯಾಗಿ ಹೊರಬರುವ ಸಾಧ್ಯತೆಯೇ ಹೆಚ್ಚಾಗಿದೆ. ಆದರೆ ಇಂತಹ ಘಟನೆಯಲ್ಲಿ ಕೇವಲ 10% ಭಾಗಿಯಾಗಿದ್ದರು ನಾನು ಜೀವಂತ ಉಳಿಯುವ ಸಾಧ್ಯತೆಯೇ ಇರಲಿಲ್ಲ. ಅದಕ್ಕೆ ಹೇಳಿದ್ದು ಪ್ರಜ್ವಲ್ ರೇವಣ್ಣನ ರೀತಿಯ ಕುಟುಂಬದಲ್ಲಿ ನಾನು ಹುಟ್ಟಬಾರದಿತ್ತೆ ಎಂದು ಮನಸ್ಸು ಹೇಳುತ್ತದೆ..

ಬದುಕಲೇ ಇಡೀ ಜೀವನವನ್ನ ಕಳೆಯುತ್ತಿರುವಾಗ, ನಮ್ಮ ಮೂಲಭೂತ ಅವಶ್ಯಕತೆಗಳ ಪೂರೈಕೆಗಾಗಿ ಬದುಕುತ್ತಿರುವಾಗ, ನನಗಿಂತ ಸಾವಿರಾರು ಪಟ್ಟು ಅಕ್ರಮ ಸಂಪತ್ತನ್ನು ಹೊಂದಿರುವ ವ್ಯಕ್ತಿಗಳ ಬಗ್ಗೆ ಈ ಸಮಾಜ ಎಷ್ಟೊಂದು ಮಲತಾಯಿ ಧೋರಣೆ ತೋರುತ್ತದೆ. ಕನಿಷ್ಠ ನನ್ನನ್ನು ಬಿಡಿ, ಅತ್ಯಾಚಾರಕ್ಕೆ, ದೌರ್ಜನ್ಯಕ್ಕೆ ಒಳಗಾಗಿರುವ ಹೆಣ್ಣುಗಳು ನಮ್ಮ ಅಕ್ಕ ತಂಗಿ ತಾಯಿ ಹೆಂಡತಿ ಪ್ರೇಯಸಿ ಇರಬಹುದು, ಕಾರಣಗಳೇನೇ ಇರಲಿ, ರಾಜಕೀಯವೇನೇ ಇರಲಿ, ಕುತಂತ್ರಗಳೇನೇ ಇರಲಿ, ಅವರ ಪರವಾಗಿ ಒಂದು ಗಟ್ಟಿ ಧ್ವನಿಯನ್ನು ಈ ಸಮಾಜ ತೋರುತ್ತಿಲ್ಲ. ಮಾಧ್ಯಮಗಳ ಪಕ್ಷಪಾತದ ಕೂಗಾಟ ಬಿಟ್ಟರೆ ಸಾಮಾನ್ಯ ಜನ ಆ ಬಗ್ಗೆ ಹೆಚ್ಚು ಮಾತನಾಡುತ್ತಿಲ್ಲ..

ಮಾತನಾಡಿದರೂ ನಟೋರಿಯಸ್ ಕ್ರಿಮಿನಲ್ ಚಟುವಟಿಕೆಯಲ್ಲೂ, ಇನ್ನೂ ಚರ್ಚೆಗೆ ಅವಕಾಶವಿದೆ ಎಂದರೆ ಪ್ರಜಾಪ್ರಭುತ್ವದ ಆ ಚರ್ಚೆಗೆ ಅವಮಾನವಾದಂತೆ. ಅಭಿವ್ಯಕ್ತಿ ಸ್ವಾತಂತ್ರ್ಯ ಸ್ವೇಚ್ಛೆಯಾಗುವುದರ ಲಕ್ಷಣ ಇದಾಗಿರುತ್ತದೆ. ಕಣ್ಣಿಗೆ ಕಾಣುವ ಅಪರಾಧಗಳಿಗೆ ಕನಿಷ್ಠ ಕೋರ್ಟ್ ಅನ್ನು ಹೊರತುಪಡಿಸಿ ನಮ್ಮ ಆತ್ಮ ಸಾಕ್ಷಿಯಾದರು ಪ್ರತಿಭಟಿಸಬೇಕಾಗುತ್ತದೆ, ವಿರುದ್ಧ ಮಾತನಾಡಬೇಕಾಗುತ್ತದೆ. ಕೆಲವರು ಆ ಹೆಣ್ಣು ಮಕ್ಕಳ ನಡತೆಯ ಬಗ್ಗೆ ಕೂಡ ಮಾತನಾಡುತ್ತಾರೆ. ಅಷ್ಟು ಬಾಲಿಶವಾಗಿದೆ ನಮ್ಮ ಮನಸ್ಥಿತಿ..

2024ರ ಈ ಸಮಯದಲ್ಲೂ, ಸ್ವತಂತ್ರ ಬಂದು ಪ್ರಜಾಪ್ರಭುತ್ವ ಜಾರಿಯಾಗಿ 75 ವರ್ಷಗಳ ನಂತರವೂ, ಬಹುತೇಕ ಮಹಿಳೆಯರಿಗೆ ಈ ರೀತಿಯ ಹಿಂಸೆಯಾದರೆ, ಇನ್ನು ಸ್ವಾತಂತ್ರ್ಯ ಪೂರ್ವದಲ್ಲಿ ಮಹಿಳೆಯರಿಗೆ ಇನ್ನೆಂತಹ ಘೋರ ಅತ್ಯಾಚಾರಗಳಾಗಿರಬಹುದು. ಇದು ಬಯಲಿಗೆ ಬಂದ ಒಂದು ಘಟನೆಯಾದರೆ, ಬಯಲಿಗೆ ಬಾರದ ಇನ್ನೆಷ್ಟು ಘಟನೆಗಳು ಹಾಗೆ ಮುಚ್ಚಿ ಹೋಗಿರುತ್ತವೆ..

ಯೋಚಿಸಿ, ಸಮಸ್ಯೆಗೆ ಪರಿಹಾರ ಕಂಡುಕೊಳ್ಳಲು ಪ್ರಯತ್ನಿಸಿ ಮತ್ತು ನಾವೆಲ್ಲರೂ ಕಾರ್ಯೋನ್ಮುಖರಾಗೋಣ..

## ಕಾಂಗ್ರೆಸ್ ಅಭ್ಯರ್ಥಿ ರಾಜು ಆಲಗೂರ ಪರ ಬೈಕ್ ರ್‍ಯಾಲಿ



**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ಈ ಸಲ ಲೋಕಸಭೆ ಚುನಾವಣೆಯಲ್ಲಿ ಜಿಲ್ಲೆಯಲ್ಲಿ ಕಾಂಗ್ರೆಸ್ ಪರ ಅಲೆ ಇದೆ. ಮತದಾರರು ನಮ್ಮ ಪರ ಇದ್ದಾರೆ. ನಮ್ಮ ಪಕ್ಷದ ಪಂಚ ಗ್ಯಾರಂಟಿ ಯೋಜನೆಗಳು ನಮ್ಮ ಕೈಹಿಡಿಯಲಿವೆ. ನಮ್ಮ ಪಕ್ಷದ ಅಭ್ಯರ್ಥಿ ಪ್ರೊ.ರಾಜು ಆಲಗೂರ ಅವರು ಅಂದಾಜು 1 ಲಕ್ಷ ಮತಗಳ ಅಂತರದಿಂದ ಗೆಲುವು ಸಾಧಿಸುವ ಮೂಲಕ ಈ ಸಲ ಲೋಕಸಭೆ ಪ್ರವೇಶಿಸಿ ಜನಪರ ಕೆಲಸ ಮಾಡುವ ವಿಶ್ವಾಸ ಇದೆ ಎಂದು ಕಾಂಗ್ರೆಸ್ ಬ್ಲಾಕ್ ಅಧ್ಯಕ್ಷ ಸುರೇಶ ಹಾರಿವಾಳ ಹೇಳಿದರು.

ಪಟ್ಟಣದ ವಿಜಯಪುರ ರಸ್ತೆಯಲ್ಲಿರುವ ಲೋಕಸಭಾ ಚುನಾವಣಾ ಕಾರ್ಯಾಲಯದ ಮುಂಭಾಗ ಶನಿವಾರ ಬೈಕ್ ರ್‍ಯಾಲಿಗೆ ಚಾಲನೆ ನೀಡಿದ ನಂತರ ಮಾತನಾಡಿದ ಅವರು, ರಾಜು ಆಲಗೂರ ಅವರು ಎರಡು ಸಲ ಶಾಸಕರಾಗಿ, ಪಕ್ಷದ ಜಿಲ್ಲಾಧ್ಯಕ್ಷರಾಗಿ ಉತ್ತಮ ಕೆಲಸ ಮಾಡಿದ್ದಾರೆ. ಇವರು ಸರಳ ಸಜ್ಜನಿಕೆಯ ರಾಜಕಾರಣಿಯಾಗಿದ್ದಾರೆ. ಇವರು ಲೋಕಸಭೆಯಲ್ಲಿ ಜಿಲ್ಲೆಯ ಜನತೆಯ ಪರವಾಗಿ ಧ್ವನಿಯಾಗಿ, ಜನಪರ ಸಮಸ್ಯೆಗಳ ಪರ ಮಾತನಾಡುವ ವ್ಯಕ್ತಿಯಾಗಿದ್ದಾರೆ. ಇವರನ್ನು ಮತದಾರರು ಆಯ್ಕೆ ಮಾಡಿದರೆ ಖಂಡಿತ ಜಿಲ್ಲೆಯ ಅಭಿವೃದ್ಧಿಯಾಗುವದರಲ್ಲಿ ಸಂದೇಹವಿಲ್ಲ ಎಂದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಬ್ಲಾಕ್ ಪ್ರಧಾನ ಕಾರ್ಯದರ್ಶಿ ರವಿ ರಾಠೋಡ, ಮುಖಂಡರಾದ ಪ್ರೇಮಕುಮಾರ ಮ್ಯಾಗೇರಿ, ಶಂಕರಗೌಡ ಬಿರಾದಾರ, ಜಟ್ಟಿಂಗರಾಯ ಮಾಲಗಾರ, ಉದಯ ಮಾಂಗಲೇಕರ, ಅಜೀಜ ಬಾಗವಾನ, ಸಂಗಯ್ಯ ಕಾಳಹಸ್ತೇಶ್ವರಮಠ, ರಮಜಾನ ಹೆಬ್ಬಾಳ, ಮುರುಗೇಶ ನಾಯ್ಕೋಡಿ, ಕಾಶೀನಾಥ ರಾಠೋಡ ಇತರರು ಇದ್ದರು. ಬೈಕ್ ರ್‍ಯಾಲಿ ನಂದಿ ಬಡಾವಣೆ, ಗಣೇಶ ನಗರ, ಇಕ್ಬಾಲ್ ನಗರ, ಬಸವ ನಗರ, ನವನಗರ ಸೇರಿದಂತೆ ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿ ರಾಜು ಆಲಗೂರ ಪರ ಘೋಷಣೆ ಕೂಗಿ ಮತಯಾಚಿಸಿದರು.

## ಶಿವಗಣಾರಾಧನೆ



**ದಿ.ಮಹಾದೇವಪ್ಪ ಗುರುಬಸಪ್ಪ ಶಿವಶಿಂಪಿ**

ಸಾ: ಮುದ್ದೇಬಿಹಾಳ

ಇವರು ಬುಧವಾರ ದಿ: 1/5/2024 ರಂದು ಕೈಲಾಸವಾಸಿಗಳಾದರೆಂದು ತಿಳಿಸಲು ವಿಷಾಧಿಸುತ್ತೇವೆ. ತನ್ನನಿಮಿತ್ಯ ಶ್ರೀಯುತರ ಶಿವಗಣಾರಾಧನೆಯನ್ನು ದಿನಾಂಕ: 5/5/2024 ರ ರವಿವಾರ ಬೆಳಿಗ್ಗೆ 10 ಗಂಟೆಗೆ, ಮುದ್ದೇಬಿಹಾಳದ ವಿದ್ಯಾನಗರದ ಮನೆಯಲ್ಲಿ ನೆರವೇರಿಸಲಾಗುವದು. ಕಾರಣ ತಾವುಗಳು ಸಕಾಲದಲ್ಲಿ ಆಗಮಿಸಿ ಮೃತರ ಆತ್ಮಕ್ಕೆ ಶಾಂತಿ ಕೋರಬೇಕಾಗಿ ವಿನಂತಿ.

ಘಟನೆ ತಿಳಿದು ದೌಡಾಯಿಸಿ ಅಂತ್ಯಕ್ರಿಯಾ ಪೂರ್ವಸಿದ್ಧತೆ ಮತ್ತು ವಿಧಿ ವಿಧಾನಗಳಲ್ಲಿ ಸಕ್ರೀಯವಾಗಿ ಭಾಗಿಯಾಗಿ ಮುಂದಾಳತ್ವ ವಹಿಸಿದವರಲ್ಲಿ ಪ್ರಮುಖರಾದ ಕಾಮರಾಜ ಬಿರಾದಾರ, ಹರೀಶ ಬೆವೂರ, ರಫೀಕ ಬೀಳಗಿ, ಎಸ್.ಆರ್.ಜೋಗಿ ವಕೀಲರು, ರಾಚೋಟಿ ಬಳಿಗಾರ, ವಿಕ್ರಂ ಶಿವಯೋಗಿಮಠ, ಗುಂಡು ಹಿರೇಮಠ, ಜಿಲಾನಿ ಮಕಾನದಾರ, ರಹೆಮಾನ ಅತ್ತಾರ, ರಜಾಕ ಅತ್ತಾರ, ಜಾಫರ ಮುಜಾವರ, ಆರೀಪ ಅತ್ತಾರ, ಸಿದ್ದು ಕುಂಬಾರ, ಬಸು ಕುಂಬಾರ, ಫೈರೋಜ ಮುಲ್ಲಾ, ಸಂಗನಾಥ ಬಿರಾದಾರ, ವಿಶಾಲ ಶಿವಯೋಗಿಮಠ, ಸಂಗಯ್ಯ ಹಿರೇಮಠ, ತೌಶೀಪ ನಾಯ್ಕೋಡಿ, ವೀರಶೈವ ಲಿಂಗಾಯತ ಸಮಾಜದ ಅಧ್ಯಕ್ಷ ಪ್ರಭುರಾಜ ಕಲಬುರ್ಗಿ ಸೇರಿದಂತೆ ಸಮಸ್ತ ದೈವದವರ ಸಹಾಯಕ್ಕೆ ಮೃತರ ಕುಟುಂಬಸ್ಥರು ಚಿರಋಣಿಯಾಗಿದ್ದೇವೆ.

**ದುಃಖತಪ್ತರು**

ಪತ್ನಿ ಭೂದೇವಿ ಮಹಾದೇವಪ್ಪ ಶಿವಶಿಂಪಿ, ಖಾಸಗಿ ಶಾಲಾ ಶಿಕ್ಷಕಿ
ಹಿರಿಯ ಮಗ : ನಾಗೇಂದ್ರ ಮಹಾದೇವಪ್ಪ ಶಿವಶಿಂಪಿ, ಉದ್ಯಮಿ
ಕಿರಿಯ ಮಗ : ಚೇತನ ಮಹಾದೇವಪ್ಪ ಶಿವಶಿಂಪಿ. ವಕೀಲರು ಹಾಗೂ ಪತ್ರಕರ್ತರು.
ಮತ್ತು ಸೊಸೆಯಂದಿರು, ಮೊಮ್ಮಕ್ಕಳು, ಬಂಧುಮಿತ್ರರು
ಮತ್ತು ಸಿಂದಗಿ, ಮುದ್ದೇಬಿಹಾಳ ಗ್ರಾಮದ ಸಮಸ್ತ ಗುರುಹಿರಿಯರು

## ಬಸವನಬಾಗೇವಾಡಿ: ಲಾರ್ವಾ ಸಮೀಕ್ಷೆ



**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ಪಟ್ಟಣದಲ್ಲಿ ಆರೋಗ್ಯ ಇಲಾಖೆಯ ಸಿಬ್ಬಂದಿಗಳು ಮನೆ ಮನೆಗೆ ತೆರಳಿ ಲಾರ್ವಾ ಸಮೀಕ್ಷೆಯನ್ನು ಶುಕ್ರವಾರ ಕೈಗೊಂಡರು. ಪ್ರತಿಯೊಂದು ಮನೆಗೆ ತೆರಳಿ ನೀರು ಸಂಗ್ರಹ ಮಾಡುವ ತಾಣಗಳನ್ನು ವೀಕ್ಷಿಸಿದರು.

ಲಾರ್ವಾ ಇರುವ ತಾಣಗಳನ್ನು ಖಾಲಿ ಮಾಡಿಸಿ ಜನರಿಗೆ ನೀರು ಸಂಗ್ರಹ ಮಾಡುವ ತಾಣಗಳನ್ನು ಆಗಾಗ ಸ್ವಚ್ಛ ಗೊಳಿಸುವಂತೆ ಹೇಳುವ ಮೂಲಕ ಜನರು ತಮ್ಮ ಆರೋಗ್ಯ ಸಂರಕ್ಷಣೆ ಮಾಡಿಕೊಳ್ಳಬೇಕು. ಲಾರ್ವಾ ಬಿಟ್ಟರೆ ಡೆಂಗ್ಯೂದಂತಹ ರೋಗಗಳು ಹರಡುವ ಸಾಧ್ಯತೆ ಇರುತ್ತದೆ. ಜನರು ಆರೋಗ್ಯ ಸಂರಕ್ಷಣೆಯ ಮುನ್ನಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳಬೇಕೆಂದು ಆರೋಗ್ಯ ನಿರೀಕ್ಷಣಾಧಿಕಾರಿ ಚಂದ್ರಶೇಖರ ಹದಿಮೂರ ಹೇಳಿದರು. ಈ ಸಂದರ್ಭದಲ್ಲಿ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಎಂ.ಎಸ್.ಬಾಗೇವಾಡಿ, ಸೋಮೇಶ ಮಾನಶೆಟ್ಟಿ, ಶಿವಾನಂದ ಕಾಖಂಡಕಿ, ಮಲೇರಿಯಾ ತಂತ್ರಜ್ಞ ಮೇಲ್ವಿಚಾರಕ ಸಂಜು ಸಜ್ಜನ ಇದ್ದರು.

## ವಿಶ್ವ ನಾಯಕ ಮೋದಿಜಿಗೆ ಭೇಟಿಯಾದ ಬಾಬಾನಗರ ಯುವಕ



**ಉದಯರಶ್ಮಿ ನ್ಯೂಸ್**

ತಿಕೋಟಾ: ತಾಲೂಕಿನ ಬಾಬಾನಗರ ಗ್ರಾಮದ ಬಿಜೆಪಿ ಪಕ್ಷದ ಸಾಮಾನ್ಯ ಕಾರ್ಯಕರ್ತ ಯುವಕ ಬಸವರಾಜ ಮಸಳಿ ಇತ್ತೀಚೆಗೆ ಬೆಳಗಾವಿ ನಗರಕ್ಕೆ ಬಿಜೆಪಿ ಪ್ರಚಾರ ರ್‍ಯಾಲಿಗೆ ಆಗಮಿಸಿದ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿಯಾಗಿದ್ದಾನೆ.

ಕಳೆದ ಆರು ವರ್ಷಗಳಿಂದ ಬಿಜೆಪಿ ಸಾಮಾನ್ಯ ಪಕ್ಷದ ಕಾರ್ಯಕರ್ತನಾಗಿ, ಬಬಲೇಶ್ವರ ಮತಕ್ಷೇತ್ರದ ಬಿಜೆಪಿ ಸಾಮಾಜಿಕ ಜಾಲತಾಣ ಸಂಚಾಲಕನಾಗಿ, ನಂತರ ಚಿಕ್ಕೋಡಿ ಲೋಕಸಭಾ ಚುನಾವಣೆಯ ಕುಡಚಿ ಮತಕ್ಷೇತ್ರದ ವಿಸ್ತಾರಕನಾಗಿ ಕಾರ್ಯನಿರ್ವಹಿಸುವಾಗ ಬೆಳಗಾವಿಗೆ ಆಗಮಿಸಿದ ಪ್ರಧಾನಿ ಮೋದಿ ನೂರಾರು ಬಿಜೆಪಿ ಕಾರ್ಯಕರ್ತರನ್ನು ಭೇಟಿಯಾಗುತ್ತಾ ಬರುವ ವೇಳೆ ಬಾಬಾನಗರದ ಹತ್ತೊಂಬತ್ತು (19) ವಯಸ್ಸಿನ ಯುವಕ ಬಸವರಾಜ ಮಸಳಿಯನ್ನು ಕಂಡು ಮುಗುಳ್ನಕ್ಕು ಹೆಸರನ್ನು ಕೇಳಿ ಚಿಕ್ಕ ವಯಸ್ಸಿನ ಈ ಕಾರ್ಯಕರ್ತನನ್ನು ಕಂಡು ಹರ್ಷವ್ಯಕ್ತಪಡಿಸಿದ್ದಾರೆ.

ಮೂರ್ತಿ ಚಿಕ್ಕದಾದರೂ ಕೀರ್ತಿ ದೊಡ್ಡದು ಎಂಬ ವಾಕ್ಯದಂತೆ ಈ ಬಾಬಾನಗರದ ಯುವಕ ಮನೆಯವರ ಸಹಾಯದಿಂದ, ಊರಿನ ಹಿರಿಯರ ಆಶೀರ್ವಾದದಿಂದ ಬಿಜೆಪಿ ಪಕ್ಷದಲ್ಲಿ ಕಾರ್ಯಕರ್ತನಾಗಿ, ರೈತರ ಮಗನಾಗಿ, ಯುವಕರಿಗೆ ಸ್ಫೂರ್ತಿದಾಯಕನಾಗಿ, ಹಿರಿಯರಿಗೆ ಕಣ್ಣಾಗಿ, ಬಡವರಿಗೆ ಆದಷ್ಟು ತನ್ನ ಕೈಯಿಂದ ಸಹಾಯ ಮಾಡುತ್ತಾ ಶಾಲೆಯ ಬಡ ಮಕ್ಕಳಿಗೆ ಸಹಾಯಕನಾಗಿ ಸೇವೆ ಸಲ್ಲಿಸುತ್ತಿರುವ ಈ ಯುವಕನ ಕುರಿತು ಗ್ರಾಮಸ್ಥರಲ್ಲಿ ಖುಷಿ ತರಿಸಿದೆ.

## ಅಗಸಿ ಮೇಲೆ ಪುನರ್ ಅಳವಡಿಸಿದ ಬಸವೇಶ್ವರ ಭಾವಚಿತ್ರ



**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ಪಟ್ಟಣದ ಅಗಸಿ ಮೇಲಗಡೆ ಬಸವೇಶ್ವರ–ಮೂಲನಂದೀಶ್ವರ ಭಾವಚಿತ್ರ(ಪೋಟೋ)ವನ್ನು ಶನಿವಾರ ದುರಸ್ತಿ ಮಾಡಿ ವಿರಕ್ತಮಠದ ಸಿದ್ದಲಿಂಗ ಸ್ವಾಮೀಜಿ ಅವರ ಸಾನಿಧ್ಯದಲ್ಲಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಅಗಸಿ ಮೇಲಗಡೆ ಪುನರ್ ಅಳವಡಿಸಲಾಯಿತು.

ಮೂಲನಂದೀಶ್ವರ–ಬಸವೇಶ್ವರ ಭಾವಚಿತ್ರವು ಅಗಸಿ ಒಳಗಡೆ ಇರುವ ಅಂಗಡಿ ಕಟ್ಟಡ ನಿರ್ಮಾಣಕ್ಕೆ ಅಗತ್ಯ ವಸ್ತುಗಳನ್ನು ತೆಗೆದುಕೊಂಡು ಹೋಗುವ ಸಂದರ್ಭದಲ್ಲಿ ಹಾನಿಯಾಗಿತ್ತು. ಭಾವಚಿತ್ರದ ಗ್ಲಾಸ್ ಒಡೆದುಹೋಗಿ 2–3 ದಿನವಾಗಿದ್ದರೂ ಹಾನಿ ಮಾಡಿದವರಾಗಲಿ ಇಲ್ಲವೇ ಅಂಗಡಿಯ ಮಾಲೀಕರಾಗಲಿ ಇದನ್ನು ಸರಿಪಡಿಸಿದೇ ಬೇಜವಾಬ್ದಾರಿ ವಹಿಸಿದ್ದನ್ನು ಹಾಗೂ ಭಾವಚಿತ್ರಕ್ಕೆ ಅಪಮಾನ ಮಾಡಿದ್ದನ್ನು ಖಂಡಿಸಿ ಕರ್ನಾಟಕ ರಕ್ಷಣಾ ವೇದಿಕೆಯ ರಾಜ್ಯ ಸಂಘಟನಾ ಕಾರ್ಯದರ್ಶಿ ಅಶೋಕ ಹಾರಿವಾಳ ಅವರು ಶುಕ್ರವಾರ ಖಂಡಿಸಿ ಎರಡು ದಿನಗಳಲ್ಲಿ ಈ ಭಾವಚಿತ್ರದ ಗ್ಲಾಸ್ ಹಾಕಿ ಅಗಸಿ ಮೇಲಗಡೆ ಭಾವಚಿತ್ರ ಅಳವಡಿಸದೇ ಹೋದರೆ ಕರವೇಯಿಂದ ಬೀದಿಗಿಳಿದು ಹೋರಾಟ ಮಾಡಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದ್ದರು.

ಇವರ ಪ್ರತಿಭಟನೆ ಫಲವಾಗಿ ಇಂದು ವಿರಕ್ತಮಠದ ಸಿದ್ದಲಿಂಗ ಸ್ವಾಮೀಜಿ ಅವರ ನೇತೃತ್ವದಲ್ಲಿ ಪಟ್ಟಣದ ಹಿರಿಯರು, ಮುಖಂಡರು ಸೇರಿ ಭಾವಚಿತ್ರ(ಪೋಟೋ)ದ ಗ್ಲಾಸ್ ಹಾಕಿಸಿ ದುರಸ್ತಿಗೊಳಿಸಿ ಮತ್ತೆ ಅದೇ ಜಾಗದಲ್ಲಿ ಪೂಜೆ ಸಲ್ಲಿಸುವ ಮೂಲಕ ಅಳವಡಿಸಲಾಯಿತು.

ಈ ಸಂದರ್ಭದಲ್ಲಿ ಕರವೇ ರಾಜ್ಯ ಸಂಘಟನಾ ಕಾರ್ಯದರ್ಶಿ ಅಶೋಕ ಹಾರಿವಾಳ ಮಾತನಾಡಿ, ಸಾಂಸ್ಕೃತಿಕ ನಾಯಕ ವಿಶ್ವಗುರು ಬಸವೇಶ್ವರ ಭಾವಚಿತ್ರವನ್ನು ಬಸವೇಶ್ವರ ಜನ್ಮಸ್ಥಳ ಬಸವನಬಾಗೇವಾಡಿ ಸೇರಿದಂತೆ ತಾಲೂಕಿನಲ್ಲಿರುವ ಎಲ್ಲ ಅಂಗಡಿ–ಮುಂಗಟ್ಟುಗಳಲ್ಲಿ, ಮನೆಗಳಲ್ಲಿ ಅಳವಡಿಸಿ ಪೂಜೆ ಸಲ್ಲಿಸುವಂತಾಗಬೇಕು. ಬಸವನಾಡಿಗೆ ಅನ್ಯರಾಜ್ಯಗಳಿಂದ ವ್ಯಾಪಾರಕ್ಕಾಗಿ ಬಂದಿರುವ ಜನರು ಸಹ ಬಸವೇಶ್ವರ ಭಾವಚಿತ್ರವನ್ನು ತಮ್ಮ ಅಂಗಡಿಗಳಲ್ಲಿ ಇಟ್ಟು ಪೂಜೆ ಸಲ್ಲಿಸುವಂತಾಗಬೇಕೆಂದರು.

ಈ ಸಂದರ್ಭದಲ್ಲಿ ಶಿವಾನಂದ ಈರಕಾರ ಮುತ್ಯಾ, ಮುಖಂಡರಾದ ಬಸವರಾಜ ಹಾರಿವಾಳ, ಭರತು ಅಗರವಾಲ, ಬಸವರಾಜ ಗೊಳಸಂಗಿ, ಎಂ.ಜಿ.ಆದಿಗೊಂಡ, ಶಂಕ್ರೆಪ್ಪ ಹಾರಿವಾಳ, ಸಿದ್ದಲಿಂಗ ಹಾರಿವಾಳ, ಚೇತನ ಕಿಣಗಿ, ಗುರಪ್ಪ ಮಸಬಿನಾಳ, ಬಸವರಾಜ ಗಚ್ಚಿನವರ, ಮಲ್ಲು ಬಾಗೇವಾಡಿ, ಶಿವಾನಂದ ತೋಳನೂರ, ವಿಜಯ ಮದ್ರಾಸ, ಗುರು ಚಟ್ಟೇರ, ಮುತ್ತು ಕಿಣಗಿ, ಬಸವರಾಜ ಹೂಗಾರ ಇತರರು ಇದ್ದರು.

## ಇಂದಿನಿಂದ ದಾರುಕಾಚಾರ್ಯ ಜಾತ್ರಾ ಮಹೋತ್ಸವ

**ಉದಯರಶ್ಮಿ ನ್ಯೂಸ್**

ಸಿಂದಗಿ: ವಿಜಯಪುರ ಜಿಲ್ಲೆಯ ಸಿಂದಗಿ ತಾಲೂಕಿನ ಕನ್ನೊಳ್ಳಿ ಹಿರೇಮಠದಲ್ಲಿ ಮೇ.05 ರಿಂದ 12ರವರೆಗೆ ಶ್ರೀ ಜಗದ್ಗುರು ದಾರುಕಾಚಾರ್ಯ ಜಾತ್ರಾ ಮಹೋತ್ಸವ, ಬಸವ ಮಹಾಪುರಾಣ ಹಾಗೂ ಲಿಂ.ಪೂಜ್ಯ ಶ್ರೀ ಮರುಳಾರಾಧ್ಯ ಶಿವಾಚಾರ್ಯರ 110ನೆಯ ಜಯಂತ್ಯುತ್ಸವ ಹಮ್ಮಿಕೊಳ್ಳಲಾಗಿದೆ ಎಂದು ಶ್ರೀಮಠದ ಸಂಚಾಲಕರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೇ 05ರಂದು ಜರುಗಲಿರುವ ಕನ್ನೊಳ್ಳಿಯ ಶ್ರೀ ಸಿದ್ದಲಿಂಗ ಜ್ಞಾನಜ್ಯೋತಿ ವಿದ್ಯಾಪ್ರಸಾರ ಸಂಘದ ಅಡಿಯಲ್ಲಿ ನೂತನವಾಗಿ ಪ್ರಾರಂಭವಾಗುವ ಮಾತೃಶ್ರೀ ಬಸಲಿಂಗಮ್ಮ ಬಾಳಪ್ಪ ಭೂಸನೂರ ಕಲಾ, ವಾಣಿಜ್ಯ ಪಪೂ ಕಾಲೇಜಿನ ಉದ್ಘಾಟನಾ ಸಮಾರಂಭದ ಪಾವನ ಸಾನಿಧ್ಯವನ್ನು ಶ್ರೀಶೈಲ ಪೀಠದ ಶ್ರೀಶ್ರೀಶ್ರೀ 1008 ಜಗದ್ಗುರು ಡಾ.ಚೆನ್ನಸಿದ್ಧರಾಮ ಪಂಡಿತಾರಾಧ್ಯ ಶಿವಾಚಾರ್ಯ ಭಗವತ್ಪಾದಂಗಳ ಅವರು ವಹಿಸಲಿದ್ದಾರೆ. ಸಮ್ಮುಖವನ್ನು ಬಂಥನಾಳ ವೃಷಭಲಿಂಗ ಮಹಾಸ್ವಾಮಿಗಳು, ಸಾರಂಗಮಠದ ಡಾ.ಪ್ರಭುಸಾರಂಗದೇವ ಶಿವಾಚಾರ್ಯರು ವಹಿಸುವರು. ಉಪದೇಶಾಮೃತವನ್ನು ಕೊಣ್ಣೂರು ಹೊರಗಿನಮಠದ ಡಾ.ವಿಶ್ವಪ್ರಭುದೇವ ಶಿವಾಚಾರ್ಯರು, ಯಂಕಂಚಿ ಶ್ರೀಮಠದ ಅಭಿನವ ರುದ್ರಮುನಿ ಶಿವಾಚಾರ್ಯರು, ಗುಣದಾಳ ವಿವೇಕಾನಂದ ದೇವರು ನೀಡುವರು. ಅಧ್ಯಕ್ಷತೆಯನ್ನು ಶಾಸಕ ಅಶೋಕ ಮನಗೂಳಿ ವಹಿಸಿಕೊಳ್ಳಲಿದ್ದಾರೆ. ಉದ್ಘಾಟನೆಯನ್ನು ಮಾಜಿ ಶಾಸಕ ರಮೇಶ ಭೂಸನೂರ ನೇರವೇರಿಸುವರು. ಮುಖ್ಯ ಅತಿಥಿಗಳಾಗಿ ಮಾಜಿ ವಿಪ ಸದಸ್ಯ ಅರುಣ ಶಹಾಪೂರ ಸೇರಿದಂತೆ ಅನೇಕರು ಗಣ್ಯರು ವಹಿಸಿಕೊಳ್ಳಲಿದ್ದಾರೆ ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹೆಚ್.ಡಿ ರೇವಣ್ಣಗೆ ನಿರೀಕ್ಷಣಾ ಜಾಮೀನು ನಿರಾಕರಿಸಿದ ಕೋರ್ಟ್

**ಉದಯರಶ್ಮಿ ನ್ಯೂಸ್**

ಲೈಂಗಿಕ ದೌರ್ಜನ್ಯ ಆರೋಪಕ್ಕೆ ಸಂಬಂಧಿಸಿದ ಮಹಿಳೆಯೊಬ್ಬರ ಅಪಹರಣ ಪ್ರತ್ಯೇಕ ಪ್ರಕರಣದಲ್ಲಿ ಶಾಸಕ ಹೆಚ್.ಡಿ ರೇವಣ್ಣ ಅವರಿಗೆ ಮಧ್ಯಂತರ ನಿರೀಕ್ಷಣಾ ಜಾಮೀನು ನೀಡಲು ಬೆಂಗಳೂರಿನ ಜನ ಪ್ರತಿನಿಧಿಗಳ ವಿಶೇಷ ನ್ಯಾಯಾಲಯ ನಿರಾಕರಿಸಿದೆ.

ರೇವಣ್ಣ ಸಲ್ಲಿಸಿದ್ದ ನಿರೀಕ್ಷಣಾ ಜಾಮೀನು ಅರ್ಜಿಯ ವಿಚಾರಣೆಯನ್ನು ನಡೆಸಿದ ವಿಶೇಷ ನ್ಯಾಯಾಲಯದ ನ್ಯಾಯಾಧೀಶ ಸಂತೋಷ ಗಜಾನನ ಭಟ್, ಜಾಮೀನು ನೀಡಲು ನಿರಾಕರಿಸಿದ್ದಾರೆ. ಅರ್ಜಿಯ ಮುಂದಿನ ವಿಚಾರಣೆಯನ್ನು ಮೇ 6ಕ್ಕೆ ಮುಂದೂಡಿದ್ದಾರೆ.

"ರೇವಣ್ಣ ಅವರನ್ನು ಬಂಧಿಸದಂತೆ ರಕ್ಷಣೆ ನೀಡಿದರೆ ಇಂದೇ ಎ□□□ಟಿ ಮುಂದೆ ಹಾಜರಾಗುತ್ತಾರೆ" ಎಂದು ಅವರ ಪರ ವಕೀಲರು ನ್ಯಾಯಾಲಯಕ್ಕೆ ಭರವಸೆ ನೀಡಿದ್ದರು. ಆದರೆ, ಈ ಮನವಿಯನ್ನು ಪುರಸ್ಕರಿಸದ ನ್ಯಾಯಾಲಯ ಜಾಮೀನು ನೀಡಲು ನಿರಾಕರಿಸಿದೆ.

ರೇವಣ್ಣ ಪರವಾಗಿ ಹಿರಿಯ ವಕೀಲ ಮೂರ್ತಿ ಡಿ. ನಾಯ್ಕ್ ಹಾಗೂ ವಿಶೇಷ ತನಿಖಾ ತಂಡದ ಪರವಾಗಿ ವಿಶೇಷ ಸರ್ಕಾರಿ ಅಭಿಯೋಜಕ ಬಿ ಎನ್ ಜಗದೀಶ್ ವಾದ ಮಂಡನೆ ಮಾಡಿದರು.

## ಡಾ. ಬಸವರಾಜ ಗೆ ಬಸವಶ್ರೀ ಪ್ರಶಸ್ತಿ



ಬಸವನಬಾಗೇವಾಡಿ: ತಾಲೂಕಿನ ಹುಣಶ್ಯಾಳ ಪಿ. ಬಿ ಗ್ರಾಮದ ಡಾ. ಬಸವರಾಜ ಹಡಪದ ಅವರಿಗೆ ದೇವರಹಿಪ್ಪರಗಿಯ ಬಸವ ಶರಣ ಸಂಗಮ ಸೇವಾ ಸಮಿತಿ ಕೊಡಮಾಡುವ ಬಸವಶ್ರೀ ಪ್ರಶಸ್ತಿ ಲಭಿಸಿದೆ. ಇವರ ಶೈಕ್ಷಣಿಕ ಸಾಧನೆಯನ್ನು ಗುರುತಿಸಿ ಬಸವಶ್ರೀ ಪ್ರಶಸ್ತಿ ನೀಡಲಾಗುತ್ತಿದೆ.

ಪ್ರಶಸ್ತಿ ಪ್ರದಾನ ಸಮಾರಂಭವು ಮೇ.10 ಬಸವ ಜಯಂತಿ ದಿನದಂದು ಜರುಗಲಿದೆ ಎಂದು ಪ್ರಕಟನೆ ತಿಳಿಸಿದೆ. **ಉದಯರಶ್ಮಿ ನ್ಯೂಸ್**

## ಬಿಂಬ

**ಉದಯರಶ್ಮಿ ದಿನಪತ್ರಿಕೆ**

**ಕಾವ್ಯರಶ್ಮಿ**

– ಬಸವರಾಜ ಹೊನಗೌಡರ

("ನಮ್ಮ ಕಥಾ ಅರಮನೆ" ಬರಹಗಾರರು)



ನಿನ್ನ ಆ ನಗುವಿನ ಬಿಂಬ
ತುಂಬಿದೆ ನನ್ನ ಮನದ ತುಂಬ
ನೀ ನವಿರಾಗಿ ನಾಚಿ ನೀರಾದಂತೆ
ಹೃದಯದಲಿ ಗೀಚಿ ಬರೆದಂತೆ॥


ನಿನ್ನದೇ ಪ್ರತಿಬಿಂಬ ಕಣಕಣದಲಿ
ನಿನಪಿನ ರಿಂಗಣ ಹೃದಯ ಗೂಡಲಿ
ಗದ್ದಲವೆಬ್ಬಿಸಿದೆ ಪ್ರೀತಿಯ ನೆನಪಿನಲಿ
ಶೃಂಗಾರೋತ್ಸವ ಮನದ ಮೂಲೆಯಲಿ॥

ಕಣ್ಣುಮುಚ್ಚಿದರೂ ಬಿಂಬ ನಿನ್ನದೆ
ಪಿಸುಮಾತಿನಲ್ಲಿನ ಭಾವ ನಿನ್ನದೆ
ಹೃದಯ ಬಡಿತದ ಶಬ್ಧ ನಿನ್ನದೆ
ಕಲ್ಪನೆಯ ಕನವರಿಕೆ ನಿನ್ನದೆ॥



## ಬೇಸಿಗೆ ರಜೆ ಅಂದು ಇಂದು

**ಭಾವರಶ್ಮಿ**



– – ಮನೋಹರ ಪೈ.

("ನಮ್ಮ ಕಥಾ ಅರಮನೆ" ಬರಹಗಾರರು)

**ಉದಯರಶ್ಮಿ ದಿನಪತ್ರಿಕೆ**

ನಮ್ಮ ಬೇಸಿಗೆ ರಜೆ ಎಂಬುದು ಹೆಚ್ಚಾಗಿ ಆರಂಭವಾಗುತ್ತಿದ್ದದ್ದು ಏಪ್ರಿಲ್ ತಿಂಗಳ ಹನ್ನೊಂದನೆಯ ತಾರೀಖಿಗೆ. ವಾರ್ಷಿಕ ಪರೀಕ್ಷೆಗಳು ಮಾರ್ಚ್ ಅಂತ್ಯದಲ್ಲೇ ಮುಗಿಯುತ್ತಿದ್ದ ಕಾರಣ ಮುಂದಿನ ಹತ್ತು ದಿನಗಳು ದೊಡ್ಡ ರಜೆ ಯಾವಾಗ ಆರಂಭವಾಗುತ್ತದೆ ಎಂಬ ಲೆಕ್ಕಾಚಾರಕ್ಕೇ ಮೀಸಲಾಗಿರುತ್ತಿದ್ದವು. ಹಾಂ... ಒಂದು ವಿಷಯ ಮರೆಯಲು ಸಾಧ್ಯವಿಲ್ಲ. ಆಗೆಲ್ಲಾ ಹೋಂ ವರ್ಕ್ ಎಂಬ ಶಬ್ದ ಬಳಕೆಯಲ್ಲಿರಲಿಲ್ಲ! ಅದು ಟೀಚರ್ ಗಳು ರಜೆಯಲ್ಲಿ ಮಾಡಲು ಮನೆಕೆಲಸ ಕೊಡುತ್ತಿದ್ದ ಕಾಲ. ಮನೆ ಕೆಲಸ ಎಂದರೆ ಕಸ ಗುಡಿಸುವುದು, ಪಾತ್ರೆ ತೊಳೆಯುವುದುದು ಎಂದೆಲ್ಲಾ ಯೋಚಿಸಬೇಡಿ. ಎಲ್ಲಾ ವಿಷಯಗಳ ಪ್ರಶ್ನೆ ಪತ್ರಿಕೆಯನ್ನು ಬಿಡಿಸುವುದು ಹಾಗೂ ಒಂದಷ್ಟು ಕಾಪಿ ಬರೆಯುವುದಕ್ಕೆ ನೀಡಿದ್ದ ಹೆಸರೇ ಈ 'ಮನೆಗೆಲಸ'!

ಪರೀಕ್ಷೆಯ ನಂತರದ ಹತ್ತು ದಿನ ಪಾಠಗಳು ಹೇಗೂ ಇರುತ್ತಿರಲಿಲ್ಲ. ಹಾಗಿರುವಾಗ ನಾವು ನಮ್ಮ ಬುದ್ಧಿವಂತಿಕೆ ಬಳಸದೇ ಇರುತ್ತಿದ್ದೆವೇ? ಟೀಚರ್ ಗಳಿಗೆ ಪಂಚಾದಿಕೆ ಮಾಡಿ ಕುಳಿತುಕೊಳ್ಳುವ ಕೆಲಸವಾದರೆ ನಮಗೆ ರಜೆ ಆರಂಭವಾಗುವದಕ್ಕಿಂತ ಮೊದಲೇ ಮನೆಗೆಲಸ ಮುಗಿಸುವ ಧಾವಂತ. ಅಂತೂ ಇಂತೂ ಹತ್ತು ಹನ್ನೊಂದು ದಿನಗಳ ಕಾಲ ಕಾದ ಬಳಿಕ ಬೇಸಿಗೆಯ ರಜೆ ಆರಂಭವಾಗುವ ದಿನ ಪಾಟಿಯ ಚೀಲವನ್ನು ಪೆಟ್ಟಿಗೆಯೊಳಗೆ ಸೇರಿಸಿದ ನಾವು ಸೊಂಟದ ಮೇಲೆ ಕೈಯಿಟ್ಟು ಮುಂದಿನ ನಲವತ್ತೈದು ದಿನಗಳನ್ನು ಸ್ವಾಗತಿಸಲು ತಯಾರು.



ಶಾಲೆಗೆ ಹೋಗುವಾಗ ಹಾಕುತ್ತಿದ್ದ ಒಳ್ಳೆಯ ಬಟ್ಟೆಗಳನ್ನು ಎಲ್ಲಕ್ಕೂ ಮೊದಲು ಒಗೆದು ಒಳಗಿಡುತ್ತಿದ್ದ ಅಮ್ಮ ರಜೆಯಲ್ಲಿ ಆಕಾಶ ಭೂಮಿ ಒಂದು ಮಾಡುತ್ತಿದ್ದ ನಮಗೆ ಹರಕಲು ಬಟ್ಟೆಯನ್ನು ಹೊಂದಿಸಿಕೊಡಲು ಪರದಾಡುತ್ತಿದ್ದಳು. ನಮಗೂ ಅಷ್ಟೇ ಸಾಕಿತ್ತು, ದಿನ ಬೆಳಗಾದರೆ ಹರಿದ ಚೆಡ್ಡಿ ಹಾಗೂ ಒಂದೆರಡು ಗುಬ್ಬಿಗಳಿಲ್ಲದ ಶರ್ಟು ಧರಿಸಿದ ನಾವು ಜೀವನದ ಆನಂದ ಪಡೆಯಲು ರೆಡಿ.

ಹತ್ತಡಿ ಅಗಲದ ಓಣಿಯ ನಡುಮಧ್ಯೆ ಮೂರು ಕೋಲುಗಳನ್ನು ನೆಟ್ಟು ಆಡುತ್ತಿದ್ದ ಕ್ರಿಕೆಟ್ ಆಟ, ಮನ್ನನ ಮನೆಯ ಹಿಂದಿನ ಮರ ಹತ್ತಿ ಕೀಳುತ್ತಿದ್ದ ಕರಂಬಲ ಹಣ್ಣು, ಹೆಗ್ಗಡೆಯವರ ಮನೆಯ ಮಾಡಿನ ಮೇಲೆ ಅಡಗಿ ಕುಳಿತು ಮಾಡುತ್ತಿದ್ದ ಬಿಂಬುಳಿಯ ಪಚ್ಚಡಿ, ಊರ ಹೊರಗಿನ ಗುಡ್ಡದದಲ್ಲಿದ್ದ ಮೊದಲನೇ ಗವಿಯ ಒಳಗೆ ಕುಳಿತು, ಆ ತಂಪಾದ ಸ್ಥಳದಲ್ಲಿ ಮಾಡಿ ತಿನ್ನುತ್ತಿದ್ದ ಕುರ್ಲು ಪಚ್ಚಡಿ, ಮೆಣಸಿನಕಾಯಿ ಕಚ್ಚಿ ಬಾಯಿಯೆಲ್ಲಾ ಖಾರವಾದಾಗ ನಾಮುಂದು ತಾ ಮುಂದು ಎಂದು ಚಪ್ಪರಿಸುತ್ತಿದ್ದ ಲಿಂಬೆ ಶರಬತ್ತು.

ಓಹ್ ನಮ್ಮ ಬೇಸಿಗೆಯ ರಜೆಯೇ... ಎಲ್ಲಿ ಮರೆಯಾಗಿ ಹೋದೆ? ಬಾವಿಯ ಮುಂದೆ ನಿಂತು ಒಂದರ ಬಳಿಕ ಒಂದು ಕೊಡದಂತೆ ನೀರೆಳೆದು ತಲೆಯ ಮೇಲೆ ನೀರು ಸುರಿದುಕೊಳ್ಳುತ್ತಿದ್ದ ಆ ನಿನ್ನ ಕಾಲ ಮತ್ತೆ ಬರುವುದು ಸಾಧ್ಯವೇ ಇಲ್ಲವೇ? ನಮ್ಮ ಮಕ್ಕಳು...

ಉಫ್... ನಮ್ಮ ಮಕ್ಕಳು...!

ನಮ್ಮ ನಮ್ಮ ಮನೆಯಲ್ಲಿರುವ ಎಳೆ ಜೀವಗಳನ್ನು ಮಕ್ಕಳು ಎಂದು ಕರೆಯಬಹುದೇ? ಬೇಸಿಗೆಯ ರಜಾ ದಿನಗಳಲ್ಲೂ ಗಂಭೀರವಾಗಿ ಮೊಬೈಲ್, ಕಂಪ್ಯೂಟರ್ ಗಳಲ್ಲಿ ಕಳೆದುಹೋಗುವ ಈ ಮನುಷ್ಯ ಮರಿಗಳನ್ನು ಮಕ್ಕಳು ಎಂದು ಕರೆಯಬಹುದೇ? ಹಿಂದಿನ ತರಗತಿಯಿಂದ ಕಾಲು ಹೊರಗಿಡುವ ಮುನ್ನವೇ ಮುಂದಿನ ತರಗತಿಯ ಒಳಗೆ ಪ್ರವೇಶಿಸುವ ಈ ಓದು ಯಂತ್ರಗಳನ್ನು ಮಕ್ಕಳು ಎಂದು ಪರಿಗಣಿಸಬಹುದೇ?

ಅವರದ್ದೇನು ತಪ್ಪು? ತಪ್ಪು ನಮ್ಮದೇ. ಅಂತಹ ಒಂದು ಅದ್ಭುತ ಬಾಲ್ಯವನ್ನು ಹೊಂದಿದ ನಾವು ನಮ್ಮ ಮಕ್ಕಳಿಗೂ ಅದೇ ಬಾಲ್ಯವನ್ನು ನೀಡಲು ಹೇಸಿದ್ದೇಕೆ? ಬಾಲ್ಯದಲ್ಲಿ ಯಾವುದೇ ಬಂಧವಿದ್ದಿರದ ನಮಗೆ ಜೀವನದಲ್ಲಿ ಸಿಕ್ಕಿದ್ದ ಯಶಸ್ಸು ನಮ್ಮ ಮಕ್ಕಳಿಗೆ ದಕ್ಕಲಿಕ್ಕಿಲ್ಲ ಎಂದು ನಾವು ಯೋಚಿಸಿದ್ದೇಕೆ?

ಸ್ಪರ್ಧೆ... ಸ್ಪರ್ಧೆ... ಸ್ಪರ್ಧೆ. ಅಂಕಗಳು, ಇನ್ನಷ್ಟು ಅಂಕಗಳು. ನಮ್ಮ ಮಕ್ಕಳು ಎಲ್ಲದರಲ್ಲೂ ಮುಂದಿರಬೇಕು...!

ಬೇಸಿಗೆಯ ರಜೆಯಲ್ಲೂ ಮಕ್ಕಳು ಆಟವಾಡಲು ತಯಾರಿಲ್ಲ, ಊರ ಹೊರಗಿನ ಗುಡ್ಡವನ್ನು ಅನ್ವೇಷಿಸಲು ತಯಾರಿಲ್ಲ, ದೇವಸ್ಥಾನದ ಕೆರೆಗೆ ಇಳಿಯಲು ತಯಾರಿಲ್ಲ, ಓಣಿಯ ಕೊನೆಯಲ್ಲಿರುವ ಮಾವಿನ ಮರದ ಮೇಲೆ ನೇತಾಡುತ್ತಿರುವ ಮಾಮಿಡಿಗೆ ಕಲ್ಲು ಹೊಡೆಯಲೂ ತಯಾರಿಲ್ಲ...!

ಯಾಂತ್ರಿಕ ಜೀವನ. ಬರೀ ಯಾಂತ್ರಿಕ ಜೀವನ. ಪುಸ್ತಕ, ಓದು, ಪರೀಕ್ಷೆಗಳು, ಅಂಕಗಳು, ಮೊಬೈಲ್, ಡಾಟಾ, ಚಾರ್ಜು, ಫೋರ್ ಜಿ, ಫೈವ್ ಜಿ...

ಛೇ... ಎಲ್ಲಾ ಬದಲಾಗಿ ಹೋಯಿತು.

ಯಾರ ತಪ್ಪೋ? ಏನು ಲೆಕ್ಕಾಚಾರವೋ? ಮಕ್ಕಳ ಬಾಲ್ಯ ಹಾಳಾಗಿಬಿಟ್ಟಿತು. ಕೆಲವೊಮ್ಮೆ ರಾತ್ರಿ ಮಲಗಿ ಕಣ್ಣು ಮುಚ್ಚಿದಾಗ "ಬೆಳಿಗ್ಗೆ ಏಳುವಾಗ ನಲವತ್ತು ವರ್ಷ ಹಿಂದಕ್ಕೆ ಹೋಗುವುದು ಸಾಧ್ಯವಿಲ್ಲವೇ?" ಎಂದನಿಸುತ್ತದೆ. ಇಲ್ಲ ಅದು ಸಾಧ್ಯವಿಲ್ಲದ ಮಾತು.

ಆದರೆ ರಜಾ ದಿನಗಳಲ್ಲಿ ಕನಿಷ್ಠ ಒಮ್ಮೆ ಮಕ್ಕಳ ಕೈ ಹಿಡಿದು ಊರ ಹೊರಗಿನ ಗುಡ್ಡ ಏರುವುದು ಸಾಧ್ಯವಿಲ್ಲವೇ? ನದಿಯ ದಡದಲ್ಲಿ ನಡೆಯುವುದು ಸಾಧ್ಯವಿಲ್ಲವೇ? ಜಲಪಾತದ ಕೆಳಗೆ ಕೈ ಅಗಲಿಸಿ ನಿಲ್ಲುವುದು ಸಾಧ್ಯವಿಲ್ಲವೇ...?

ಪ್ರಯತ್ನಿಸಬೇಕು. ಪ್ರಯತ್ನಿಸಿದರೆ ಎಲ್ಲವೂ ಸಾಧ್ಯವಿದೆ.



**Printed by:** AVINASH BIDARI, **Published and Onwed by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR